ವಿಜಯಪುರ | ಸಂಪುಟ 02 | ಸಂಚಿಕೆ 75 | ಪುಟ 4 | ₹ 3.00
https://udayarashminews.com
udayarashmi 90088 88340

# ಉದಯ ರಶ್ಮಿ
Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ
ಸಂಪಾದಕ : ಇಂದುಶೇಖರ ಮಣೂರ
Editor: Indushekhar Manur
editor.udayarashmi@gmail.com
RNI NO: KARKAN/2023/86203
ಶುಕ್ರವಾರ, ಮೇ 10, 2024

“ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಅನುತ್ತೀರ್ಣ ವಿದ್ಯಾರ್ಥಿಗಳು ಯಾವ ಕಾರಣ-ಕ್ಕೂ ದೃತಿಗೆಡುವ ಅವಶ್ಯಕತೆಯಿಲ್ಲ. ನಿಮಗೆ ಉತ್ತೀಣ-ರಾಗಲು ಮತ್ತೊಂದು ಅವಕಾಶವಿದ್ದು, ಜೂ.7 ರಿಂದ ನಡೆವ ಎಸ್ಸೆಸ್ಸೆಲ್ಸಿ ಪರೀಕ್ಷೆ-2 ರಲ್ಲಿ ತಮಗೆ ಪುನಃ ಪರೀಕ್ಷೆ ಬರೆಯುವ ಅವಕಾಶವಿದೆ.”




– ಟಿ. ಭೂ ಬಾಲನ್
ಜಿಲ್ಲಾಧಿಕಾರಿ, ವಿಜಯಪುರ

ಸ್ಯಾಮ್ ಪಿತ್ರೋಡಾ ಜನಾಂಗೀಯ ನಿಂದನೆ ಹೇಳಿಕೆಗೆ ಖಂಡನೆ । ಪ್ರತಿಪಕ್ಷ ನಾಯಕ ಆರ್.ಅಶೋಕ ಆಕ್ರೋಶ

# ಕಾಂಗ್ರೆಸ್‌ನಿಂದ ಜನಾಂಗೀಯ ನಿಂದನೆ : ಆರ್.ಅಶೋಕ್

ಬೆಂಗಳೂರು: ಸ್ಯಾಮ್ ಪಿತ್ರೋಡಾ ಅವರ ಜನಾಂಗೀಯ ನಿಂದನೆಯ ಹೇಳಿಕೆಯನ್ನು ಬಿಜೆಪಿ ಖಂಡಿಸುತ್ತದೆ. ದಕ್ಷಿಣ ಭಾರತದ ಜನರು ಐದು ಸಾವಿರ ವರ್ಷಗಳ ಇತಿಹಾಸ ಹೊಂದಿದ್ದಾರೆ. ಇದನ್ನು ತಿಳಿಯದೆ ನಮ್ಮನ್ನು ಆಫ್ರಿಕನ್ನರು ಎನ್ನುವ ಮೂಲಕ ಶಾಂತಿಯ ತೋಟವನ್ನು ಕದಡಿದ್ದಾರೆ ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸ್ಯಾಮ್ ಪಿತ್ರೋಡ ಅವರ ಹೇಳಿಕೆ ಕಾಂಗ್ರೆಸ್‌ನ ಮನಸ್ಥಿತಿಯನ್ನು ತೋರಿಸಿದೆ. ವರ್ಣಭೇದ ನೀತಿ ಹಾಗೂ ಬಣ್ಣದ ಕುರಿತು ಮಾತಾಡುವುದು ಕಾಂಗ್ರೆಸ್‌ನ ಡಿಎನ್‌ಎ ಯಲ್ಲೇ ಇದೆ. ಇದಕ್ಕೂ ಮುನ್ನವೇ ಹಿನ್ನೆಲೆ ಗಾಯಕರಾಗಿ ಡಿ.ಕೆ.ಸುರೇಶ್ ಈ ಮಾತನಾಡಿದ್ದರು. ಈಗ ದೇಶ ಒಡೆಯುವ, ಛಿದ್ರ ಮಾಡುವ ಮಾತನ್ನು ಪಿತ್ರೋಡಾ ಹೇಳಿದ್ದಾರೆ. ಈ ಮೂಲಕ ಕಾಂಗ್ರೆಸ್‌ನ ಸಿದ್ಧಾಂತವನ್ನು ತಿಳಿಸಿದ್ದಾರೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಬಣ್ಣದ ಗ್ಯಾರಂಟಿಯನ್ನು ನೀಡಿದ್ದಾರೆ. ಹಿಂದೆ ವರ್ಣಭೇದ ನೀತಿಯಿಂದ ಅನೇಕ ಸಾವು ನೋವುಗಳಾಗಿತ್ತು. ನೆಲ್ಸನ್ ಮಂಡೇಲ, ಮಹಾತ್ಮ ಗಾಂಧೀಜಿಯಿಂದ ಇದರ ವಿರುದ್ಧ ಹೋರಾಟ ನಡೆದಿತ್ತು. ಆದರೆ ಕಾಂಗ್ರೆಸ್ ಬಣ್ಣದ ಆಧಾರದಲ್ಲಿ ಜನರ ಮನಸ್ಸನ್ನು ಒಡೆದಿದೆ. 5 ಸಾವಿರ ವರ್ಷಗಳ ಇತಿಹಾಸವಿರುವ ನಮ್ಮನ್ನು




ಆಫ್ರಿಕಾದವರು ಎಂದಿದ್ದಾರೆ. ಒಕ್ಕಲಿಗರು, ಲಿಂಗಾಯಿತರು, ದಲಿತರಿಗೆ ಕಾಂಗ್ರೆಸ್ ಯಾವ ಬಣ್ಣ ಹಚ್ಚುತ್ತದೆ ಎಂದು ಪ್ರಶ್ನೆ ಮಾಡಿದರು.

ಸೋನಿಯಾ ಗಾಂಧಿ ಇಟಲಿಯಿಂದ ಬಂದಿದ್ದರೂ ಅವರನ್ನು ಭಾರತೀಯರೆಂದು ಒಪ್ಪಿಕೊಳ್ಳುವಂತೆ ಕಾಂಗ್ರೆಸ್ ನಾಯಕರು ಒತ್ತಾಯಿಸುತ್ತಾರೆ. ಸೋನಿಯಾ ದೇಶದ ಸೊಸೆ ಎಂದು ನಾವೆಲ್ಲರೂ ಒಪ್ಪಿಕೊಂಡಿದ್ದೇವೆ. ಸೋನಿಯಾ, ರಾಹುಲ್ ಗಾಂಧಿ, ಪ್ರಿಯಾಂಕ ಗಾಂಧಿ ವಾಡ್ರಾ ಯಾವ ದೇಶದಿಂದ ಬಂದಿದ್ದಾರೆ ಎಂದು ಮೊದಲು ತಿಳಿಸಬೇಕು. ನುಡಿದಂತೆ ನಡೆಯುವ ಸಿಎಂ ಸಿದ್ದರಾಮಯ್ಯ ಐದು ಗ್ಯಾರಂಟಿ ಹೇಳುತ್ತಾರೆ. ಈಗ ಬಿಳಿ ಗ್ಯಾರಂಟಿ, ಕಪ್ಪು ಗ್ಯಾರಂಟಿ, ಚೈನೀಸ್ ಗ್ಯಾರಂಟಿ, ಅರಬ್ಬಿ ಗ್ಯಾರಂಟಿ, ಆಫ್ರಿಕಾ ಗ್ಯಾರಂಟಿಯನ್ನು ನೀಡಿದ್ದಾರೆ ಎಂದರು.

ಮಹಾರಾಷ್ಟ್ರದಲ್ಲಿ ಹುಟ್ಟಿದ ಡಾ.ಬಿ.ಆರ್. ಅಂಬೇಡ್ಕರ್ ಯಾರು, ಗುಜರಾತ್‌ನಲ್ಲಿ ಹುಟ್ಟಿದ ಗಾಂಧೀಜಿ ಯಾರು, ಬೆಂಗಳೂರು ಕಟ್ಟಿದ ಕೆಂಪೇಗೌಡರು ಯಾರು ಎಂದು ಕಾಂಗ್ರೆಸ್ ಹೇಳಬೇಕು. ಈಗಾಗಲೇ ಕಾಂಗ್ರೆಸ್ ಸರ್ಕಾರ ಹಿಂದೂಗಳನ್ನು ಎರಡನೇ ದರ್ಜೆಯ ಪ್ರಜೆಗಳಾಗಿ ನೋಡುತ್ತಿದೆ. ಮೋದಿ ಎಂದರೆ ಕಪಾಳಕ್ಕೆ ಹೊಡಿ ಎಂದವರು ಪಿತ್ರೋಡಾಗೆ ಹೇಗೆ ಹೊಡೆಯುತ್ತಾರೆ ಎಂದು ಪ್ರಶ್ನೆ ಮಾಡಿದರು.

ಹಿಂದೆ ಬ್ರಿಟಿಷರು ದತ್ತು ಮಕ್ಕಳಿಗೆ ಹಕ್ಕಿಲ್ಲ ಎಂಬ ಕಾನೂನು ತಂದು ರಾಜ್ಯಗಳನ್ನು ಕಿತ್ತುಕೊಂಡರು. ಅದೇ ರೀತಿ ಈಗಿನ ಕಾಂಗ್ರೆಸ್ ಸ್ವಂತ ಮಕ್ಕಳಿಗೆ ಹಕ್ಕಿಲ್ಲ ಎಂಬ ಕಾನೂನು ತರಲು ಮುಂದಾಗಿದ್ದಾರೆ. ಮಾಜಿ ಸ್ಪೀಕರ್ ರಮೇಶ್ ಕುಮಾರ್ ಅವರು ಲೂಟಿ ಮಾಡಿದ್ದೇವೆ ಎಂದು ಹೇಳಿದ್ದರು. ಅಂತಹ ಲೂಟಿಯ ಸಂಪತ್ತನ್ನು ನರೇಂದ್ರ ಮೋದಿ ಜನರಿಗೆ ನೀಡಲಿದ್ದಾರೆ. ದಕ್ಷಿಣ ಭಾರತದವರು ಆಫ್ರಿಕಾದವರು ಎನ್ನುವುದಾದರೆ ಸಿಎಂ ಸಿದ್ದರಾಮಯ್ಯ ಮೊದಲು ಆಫ್ರಿಕಾಗೆ ಹೋಗಿ ಅಲ್ಲಿ ಸಿಎಂ ಆಗಬೇಕು ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಸಿಲರಿ ನೀರು, ಜ್ಯೂಸ್ ಕುಡಿದುಕೊಂಡು ಎಸಿಯಲ್ಲಿ ಕುಳಿತು ಪ್ರಧಾನಿ ನರೇಂದ್ರ ಮೋದಿಗೆ ಪ್ರಶ್ನೆ ಮಾಡಿದ್ದಾರೆ. ರಾಜ್ಯ ಸರ್ಕಾರ ಜನರಿಗೆ ನೀರು ನೀಡಿಲ್ಲ, ಹಾಲಿನ ಪ್ರೋತ್ಸಾಹಧನ ನೀಡಿಲ್ಲ, ಆಂಬ್ಯುಲೆನ್ಸ್ ಸಿಬ್ಬಂದಿಗೆ ಸಂಬಳ ನೀಡಿಲ್ಲ, ಬಿಬಿಎಂಪಿ ಗುತ್ತಿಗೆದಾರರಿಗೆ ಬಿಲ್ ಕೊಟ್ಟಿಲ್ಲ, ನೇಹಾ ಹತ್ಯೆಗೆ 120 ದಿನಗಳಲ್ಲಿ ತೀರ್ಪು ಕೊಡುತ್ತೇನೆಂದು ಇನ್ನೂ ತನಿಖೆ ಶುರು ಆಗಿಲ್ಲ. ಪ್ರಧಾನಿ ನರೇಂದ್ರ ಮೋದಿ ಒಂದು ದಿನ ರಜೆ ಇಲ್ಲದೆ ಕೆಲಸ ಮಾಡುತ್ತಿದ್ದಾರೆ. ಆದರೆ ಸಿಎಂ ಸಿದ್ದರಾಮಯ್ಯ ಎಲ್ಲ ಬಗೆಯ ರಜೆ ಪಡೆದು ಮಜಾ ಮಾಡುತ್ತಿದ್ದಾರೆ. ಸದಾ ಕೆಲಸ ಮಾಡುವ ಮೋದಿ ಹಾಗೂ ಕೆಲಸ ಕಳ್ಳ ಸಿಎಂ ಸಿದ್ದರಾಮಯ್ಯ ಅವರ ನಡುವೆ ಎಲ್ಲಿಯ ಹೋಲಿಕೆ ಎಂದು ವ್ಯಂಗ್ಯವಾಡಿದರು.

**ರಾಜ ನುಡಿ**

ಇಂದಿನ ಸಾಧನೆಗಳು
ನಿನ್ನೆಯ ಅಸಾಧ್ಯತೆಗಳು.
ಇಂದಿನ ಕಷ್ಟಗಳಿಗೆ ಇಷ್ಟು
ಭರವಸೆ ಸಾಕಲ್ಲವೇ ..!

-ಡಾ. ರಾಜಶೇಖರ ನಾಗೂರ

## ಇಂದಿನಿಂದ ಕಾಲುವೆಗಳ ಮೂಲಕ ಕೆರೆಗಳಿಗೆ ನೀರು :ಎಂ.ಬಿ.ಪಾಟೀಲ

ಉದಯರಶ್ಮಿ ನ್ಯೂಸ್

ವಿಜಯಪುರ: ಬಿರುಬೇಸಿಗೆಯಲ್ಲಿ ತತ್ತರಿಸಿದ ಜನ-ಜಾನುವಾರುಗಳಿಗೆ ಕುಡಿಯುವ ನೀರು ಪೂರೈಸಲು ಆಲಮಟ್ಟಿ ಜಲಾಶದಿಂದ ಮುಳವಾಡ ಏತನೀರಾವರಿ ಹಾಗೂ ಚಿಮ್ಮಲಗಿ ಏತನೀರಾವರಿ ಯೋಜನೆಯಡಿ ಇಂದಿನಿಂದ ಕಾಲುವೆಗಳ ಮೂಲಕ ಕೆರೆಗಳಿಗೆ ನೀರು ಹರಿಸಲಾಗುವುದು ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ವಿಜಯಪುರ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿರುವದನ್ನು ತಪ್ಪಿಸಲು ಈ ಹಿಂದೆ ತಿಡಗುಂದಿ ಕಾಲುವೆಯಿಂದ ನೀರು ಹರಿಸಿ, ಭೂತನಾಳ ಕೆರೆ ತುಂಬಿಸಿ, ನಗರದಲ್ಲಿ ಸಮರ್ಪಕವಾಗಿ ಕುಡಿಯುವ ನೀರು ಪೂರೈಸಲಾಗಿತ್ತು. ಈಗ ಮತ್ತೆ ಭೂತನಾಳ ಕೆರೆಗೆ ಹಾಗೂ ಇಂಡಿ ತಾಲೂಕಿನ ಹೊರ್ತಿ ಮತ್ತು ಇತರೆ 31 ಬಹುಹಳ್ಳಿ ಕುಡಿಯುವ ನೀರು ಸರಬರಾಜು ಯೋಜನೆಯಡಿ ತಿಡಗುಂದಿ ಕಾಲುವೆ ಮೂಲಕ ನೀರು ಹರಿಸಲಾಗುವುದು.



ಬಸವನಬಾಗೇವಾಡಿ ತಾಲೂಕಿನ ಅರೇಶಂಕರ ಮತ್ತು ಇತರೆ 19 ಗ್ರಾಮಗಳ ಕಣಕಾಲ ಮತ್ತು 11 ಗ್ರಾಮಗಳ ಬಹುಹಳ್ಳಿ ಕುಡಿಯುವ ನೀರು ಸರಬರಾಜು ಯೋಜನೆಯು 0.45ಟಿ.ಎಂ.ಸಿ ನೀರನ್ನು ಮುಳವಾಡ ಏತನೀರಾವರಿ ಹಾಗೂ ಚಿಮ್ಮಲಗಿ ಏತನೀರಾವರಿ ಯೋಜನೆಯಡಿ ಕೆರೆಗಳಿಗೆ ಹರಿಸುವಂತೆ ಕೋರಲಾಗಿ-ತ್ತು. ಇದಕ್ಕೆ ಸ್ಪಂಧಿಸಿದ ಬೆಳಗಾವಿ ಪ್ರಾದೇಶಿಕ ಆಯುಕ್ತರು ಮೇ 28 ರವರೆಗೆ 2 ಟಿ.ಎಂ.ಸಿ ನೀರು ಕೆರೆಗಳಿಗೆ ಹರಿಯಲಿದೆ ಎಂದರು.

ಭೀಕರ ಬರ ಹಾಗೂ ಬೇಸಿಗೆ ಇರುವುದರಿಂದ ಕುಡಿಯುವ ನೀರು ಒದಗಿಸಲು ಕಾಲುವೆಗಳಿಗೆ ನೀರು ಹರಿಸುವಂತೆ ಒಂದು ತಿಂಗಳಿನಿಂದ ನಿರಂತರವಾಗಿ ಜಿಲ್ಲಾಧಿಕಾರಿಗಳ ಮೂಲಕ ಕೋರಿದ್ದೆ. ನೀತಿಸಂಹಿತೆ ಕಾರಣ ಚುನಾವಣೆ ಆಯೋಗದ ಅನುಮತಿ ಪಡೆದು, ಕಾಲುವೆ ಮೂಲಕ ನೀರು ಹರಿಸಲು ಇದೀಗ ಆದೇಶ ನೀಡಿದ್ದಾರೆ ಎಂದು ಪ್ರಕಟಣೆಯಲ್ಲಿ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ.

## ಅಂಗನವಾಡಿಗೆ ಕಳಪೆ ಆಹಾರ ವಿತರಣೆ :ಗ್ರಾಮಸ್ಥರ ದೂರು




ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ತಾಲೂಕಿನ ತಾರನಾಳ ಗ್ರಾಮದ ಅಂಗನವಾಡಿಯಲ್ಲಿ ವಿತರಿಸಲಾದ ಪೌಷ್ಟಿಕ ಅಹಾರ ಪದಾರ್ಥಗಳು (ರವಾ, ಬೆಲ್ಲ, ಉಪ್ಪಿಟ್ಟು ಚಟ್ನಿ) ಅತ್ಯಂತ ಕಳಪೆ ಮಟ್ಟದ್ದಾಗಿವೆ. ಅಲ್ಲದೇ ಮೊಟ್ಟೆ ಸೇರಿದಂತೆ ಇನ್ನುಳಿದ ಅಹಾರ ಪದಾರ್ಥಗಳನ್ನು ಮಕ್ಕಳಿಗೆ, ಗರ್ಭಿಣಿ ಬಾಣಂತಿಯರಿಗೆ ನೀಡುತ್ತಿಲ್ಲ ಎಂದು ಗ್ರಾಮಸ್ಥರು ದೂರಿದರು.

ಕಳಪೆ ಮಟ್ಟದ್ದಾಗಿವೆ ಎಂದು ದೂರಿದ ಅಹಾರ ಪದಾರ್ಥಗಳ ಫೋಟೋ ಕ್ಲಿಕ್ಕಿಸಿ ಮಾಧ್ಯಮಕ್ಕೆ ಮಾಹಿತಿ ನೀಡಿದ ಗ್ರಾಮಸ್ಥರು, ಪೌಷ್ಟಿಕ ಅಹಾರ ಪದಾರ್ಥಗಳನ್ನು ಸೇವಿಸಿ ಗರ್ಭಿಣಿಯರು ಆರೋಗ್ಯಯುತ ಮಗುವಿಗೆ ಜನ್ಮ ನೀಡಲಿ, ಮಕ್ಕಳು ದೈಹಿಕವಾಗಿ ಸದೃಢರಾಗಲಿ ಎಂಬುದು ಈ ಯೋಜನೆಯ ಉದ್ದೇಶ. ಆದರೆ ಈ ಯೋಜನೆ ಸದುಪಯೋಗವಾಗುತ್ತಿಲ್ಲ. ಕಳಪೆ ಗುಣಮಟ್ಟದ ಅಹಾರಪದಾರ್ಥಗಳನ್ನು ವಿತರಣೆ ಮಾಡುತ್ತಿದ್ದಾರೆ. ಅಲ್ಲದೇ ಇನ್ನುಳಿದ ಅಹಾರ ಪದಾರ್ಥಗಳನ್ನು ನೀಡುತ್ತಿಲ್ಲ. ಮೊಟ್ಟೆಯನ್ನಂತೂ ಕಂಡೇ ಇಲ್ಲ. ಅಪೌಷ್ಟಿಕ ಅಹಾರ ಸೇವಿಸಿದ ಯಾರಿಗಾದರೂ ಆರೋಗ್ಯದಲ್ಲಿ ಏರುಪೇರಾದರೆ ಆದರ ಹೊಣೆಯನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳೇ ಹೊರಬೇಕಾಗುತ್ತದೆ. ಈ ಕೂಡಲೇ ಸೂಕ್ತ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.



**ವಚನ ಚಿಂತನ 376**



*ಅಂಗೈಯೊಳಗಿನ ಕೂಸು ಆಕಾಶವ ನುಂಗಿ,*
*ಮಂಗಳಾಂಗಿಯ ಸಂಗವ ಮಾಡಿ*
*ಕಂಗಳಿಲ್ಲದವನ ಕೈಪಿಡಿದು,*
*ಕೋಲ ಮುರಿದು, ಕಾಲ ಕಡಿದು, ಕಮಲದ*
*ಹಾಲು ಕುಡಿದು,*
*ಸತ್ತು ಎತ್ತ ಹೋಯಿತೆಂದರಿಯೆನಯ್ಯಾ*
*ಕಾಡನೊಳಗಾದ ಶಂಕರಪ್ರಿಯ ಚನ್ನಕದ*
*ಂಬಲಿಂಗನಿರ್ಮಾಯಪ್ರಭುವೆ.*

ಇದೊಂದು ಬೆಡಗಿನ ವಚನವಾಗಿದ್ದು ಇಲ್ಲಿ ಕಾಡಸಿದ್ದೇಶ್ವರರು ಇಷ್ಟಲಿಂಗ ಪೂಜೆಯಿಂದ ಸಾಧಕನ ಅಂಗದೊಳಗೆ ಉಂಟಾಗುವ ಪರಿಣಾಮವನ್ನು ಸೆರೆಹಿಡಿದಿದ್ದಾರೆ. ವಚನದ ಪ್ರಾರಂಭದ ಸಾಲಿನಲ್ಲಿ ವಿವರಿಸಿದಂತೆ “ಅಂಗೈಯೊಳಗಿನ ಕೂಸು” ಎಂಬುದು ಇಷ್ಟಲಿಂಗವನ್ನು ಸೂಚಿಸುತ್ತದೆ. ಕೂಸು ವಿಕಸನ ಹೊಂದಿ ವ್ಯಕ್ತಿಯಾಗುವ ಪ್ರಾರಂಭದ ಹಂತವನ್ನು ಸೂಚಿಸುತ್ತದೆ. ಸಾಧಕನ ಕೈಯೊಳಗಿನ ಇಷ್ಟಲಿಂಗವು ಪ್ರಾರಂಭದಲ್ಲಿ ಸ್ಥಾವರವಾಗಿ ಗೋಚರಿಸಿದರೂ ಹಂತಹಂತವಾಗಿ ಅದು ಚೈತನ್ಯವನ್ನು ಸೆರೆಹಿಡಿದು ಸಾಧಕನ ಮನದೊಳಗೆ ಪ್ರವಹಿಸುವ ಕಾರ್ಯವನ್ನು ಕೈಗೊಳ್ಳುವುದರ ಮೂಲಕ ಅದು ಆಕಾಶದಂತೆ ವಿಸ್ತಾರವಾಗುತ್ತಾ ಹೋಗುವುದನ್ನು “ಆಕಾಶವ ನುಂಗಿ” ಎನ್ನಲಾಗಿದೆ. ಅರೆ ತೆರೆದ ಕಣ್ಣುಗಳಿಂದ ಇಷ್ಟಲಿಂಗದ ಮೇಲೆ ದೃಷ್ಟಿಯನ್ನು ಕೇಂದ್ರೀಕರಿಸುತ್ತ ಹೋದಂತೆ ಅಂಗದೊಳಗಿನ ಚಕ್ರಗಳು ಜಾಗೃತಗೊಳ್ಳುತ್ತವೆ ಹಾಗೂ ಮನದಲ್ಲಿ ಮಹದೇವನ ಬೆರೆತ ಸುಖದ ಅನುಭವವಾಗು ತ್ತದೆ ಇದನ್ನು “ಮಂಗಳಾಂಗಿಯ ಸಂಗವ ಮಾಡಿ ಕಂಗಳಿಲ್ಲದವನ ಕೈಪಿಡಿದು,” ಎನ್ನಲಾಗಿದೆ . ಈ ಸ್ಥಿತಿಯಲ್ಲಿ ಅಂಗಭಾವ ಅಳಿದು ಲಿಂಗವೇ ಆಗುವ ಮನವು ಮಹಾಲಿಂಗದೊಂದಿಗೆ ಬೆರೆಯುತ್ತಿರುವ ಅನುಭವ ಉಂಟಾಗುತ್ತದೆ ಅಲ್ಲಿ ಯಾವುದೇ ಸಾಧನ ಸಲಕರ ಣೆಗಳ ಅವಶ್ಯಕತೆ ಇಲ್ಲದೆ ಮನದ ಚಲನೆ ನಡೆಯುವುದನ್ನು “ಕೋಲು ಮುರಿದು” ಎಂದಿರುವುದು. ಈ ಅನುಭವ ಕಾಲಾತೀತ ವಾಗಿದ್ದು ಭೂಮಿಯ ಮೇಲಿನ ಯಾವ ಸಮಯವು ಅದಕ್ಕೆ ಅನ್ವಯವಾಗದೆ ಇರುವುದನ್ನು “ಕಾಲ ಕಡಿದು” ಎಂದಿದ್ದಾರೆ. “ಕಮಲದ ಹಾಲು ಕುಡಿದು ಸಾಯುವುದು” ಅಂಗದೊಳಗಿನ ವಿವಿಧ ಚಕ್ರಗಳ ಚೈತನ್ಯದ ಅನುಭಾವವನ್ನು ಸೂಚಿಸುತ್ತದೆ. ಇದು ಇಷ್ಟಲಿಂಗದ ಮೂಲಕ ಪ್ರಾಣಲಿಂಗದ ಮಹಾಲಿಂಗ ಸಂಗಮ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

### ಢವಳಗಿಯ ಪವಿತ್ರಾ ಕೊಣ್ಣೂರ 623 (ಶೇ99.68) ಅಂಕ ಪಡೆದು ಜಿಲ್ಲೆಗೆ ಪ್ರಥಮ

## ಎಸ್ಸೆಸ್ಸೆಲ್ಸಿ ಪರೀಕ್ಷೆ: ಬಸ್ ಕಂಡೆಕ್ಟರ್ ಪುತ್ರಿ ರಾಜ್ಯಕ್ಕೆ ತೃತೀಯ

ಮುದ್ದೇಬಿಹಾಳ: ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತಾಲೂಕಿನ ಢವಳಗಿ ಗ್ರಾಮದ ಕೆಎಸ್‌ಆರ್‌ಟಿಸಿ ಬಸ್ ಕಂಡಕ್ಟರ್ ಪುತ್ರಿ ಪವಿತ್ರಾ ಕೊಣ್ಣೂರ ಇಂಗ್ಲೀಷ್ ಮಾಧ್ಯಮದಲ್ಲಿ 623 (ಶೇ99.68) ಅಂಕಗಳನ್ನು ಗಳಿಸುವ ಮೂಲಕ ಜಿಲ್ಲೆಗೆ ಪ್ರಥಮ, ರಾಜ್ಯದಲ್ಲಿ ತೃತೀಯ ಸ್ಥಾನ ಗಿಟ್ಟಿಸಿಕೊಂಡು ಸಾಧನೆ ಮಾಡಿದ್ದಾಳೆ.


ತಾಲೂಕಿನ ಬಿದರಕುಂದಿ ಗ್ರಾಮದ ಆದರ್ಶ ವಿದ್ಯಾಲಯದಲ್ಲಿ ವಿದ್ಯಾಭ್ಯಾಸ ಮಾಡಿದ ಪವಿತ್ರಾ ಇಂಗ್ಲೀಷ್ ವಿಷಯದಲ್ಲಿ 125ಕ್ಕೆ 124, ವಿಜ್ಞಾನ ವಿಷಯದಲ್ಲಿ 100ಕ್ಕೆ 99 ಸೇರಿದಂತೆ ಉಳಿದ ಎಲ್ಲ ವಿಷಯಗಳಿಗೆ ನೂರಕ್ಕೆ ನೂರು ಅಂಕ ಪಡೆದಿದ್ದಾಳೆ. ಪುತ್ರಿಯ ಸಾಧನೆಗೆ ತಂದೆ ಮಡಿವಾಳಪ್ಪಗೌಡ ಕೊಣ್ಣೂರ, ತಾಯಿ ಭಾರತಿ ಕೊಣ್ಣೂರ ಹರ್ಷ ವ್ಯಕ್ತಪಡಿಸಿದ್ದಾರೆ.

ಫಲಿತಾಂಶ ಪ್ರಕಟವಾಗುತ್ತಿದ್ದಂತೆಯೇ



“ಉದಯರಶ್ಮಿ” ಪತ್ರಿಕೆಯೊಂದಿಗೆ ಮಾತನಾಡಿದ ವಿದ್ಯಾರ್ಥಿನಿ ಪವಿತ್ರಾ, ನನಗೆ ಇಷ್ಟೊಂದು ಅಂಕಗಳು ಬರುತ್ತೆ ಅಂದುಕೊಂಡಿರಲಿಲ್ಲ. ನನ್ನ ಸಾಧನೆಗೆ ನನ್ನ ತಂದೆ ತಾಯಿಯ ಆಶೀರ್ವಾದ, ಶಿಕ್ಷಕರ ಪರಿಶ್ರಮ ಕಾರಣ. ಮುಂದೆ ಮೆಡಿಕಲ್ ಕ್ಷೇತ್ರದಲ್ಲಿ ಕಾಲಿರಿಸುವ ಆಸೆ ನನ್ನದು ಎಂದಿದ್ದಾಳೆ.

**ಕ್ಷೇತ್ರ ಶಿಕ್ಷಣಾಧಿಕಾರಿಯಿಂದ ಸನ್ಮಾನ**



ಮುದ್ದೇಬಿಹಾಳ: ತಾಲೂಕಿನ ಬಿದರಕುಂದಿ ಗ್ರಾಮದ ಆದ ರ್ಶವಿದ್ಯಾಲಯದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಇಂಗ್ಲೀಷ್ ಮಾಧ್ಯಮದಲ್ಲಿ ಜಿಲ್ಲೆಗೆ ಪ್ರಥಮ ಮತ್ತು ರಾಜ್ಯಕ್ಕೆ ತೃತೀಯ ಸ್ಥಾನ ಪಡೆದ ವಿದ್ಯಾರ್ಥಿನಿ ಪವಿತ್ರಾ ಕೊಣ್ಣೂರ ರನ್ನು ಪಾಲಕರ ಸಮ್ಮುಖದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜ ಸಾವಳಗಿ ಸನ್ಮಾನಿಸಿ ಗೌರವಿಸಿದರು.

ಈ ವೇಳೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ತಾಲೂಕು ನೂಡಲ ಎಚ್.ಎ.ಮೇಟಿ, ಶಾಲೆಯ ಮುಖ್ಯಗುರುಮಾತೆ ನೀಲಮ್ಮ ತೆಗ್ಗಿನಮಠ, ಶಿಕ್ಷಕರಾದ ಎಸ್.ಬಿ.ಸಜ್ಜನ, ಎಸ್.ಆರ್.ಪಾಟೀಲ, ಸಿಬ್ಬಂದಿ ಆರ್.ಕೆ.ದೇವಗಿರಿಕರ ಇದ್ದರು.

## ಕಾಲುವೆಗೆ ನೀರು ಹರಿಸಿ ಖಾಲಿ ಇರುವ ಕೆರೆಗಳ ಭರ್ತಿಗೆ ಆಗ್ರಹ

ಆಲಮಟ್ಟಿ: ಆಲಮಟ್ಟಿ ಜಲಾಶಯದ ವ್ಯಾಪ್ತಿಗೆ ಬರುವ ಮುಳವಾಡ ಹಾಗೂ ಚಿಮ್ಮಲಗಿ ಏತ ನೀರಾವರಿಗೆ ಸಂಬಂಧಿಸಿದ ಎಲ್ಲ ಕಾಲುವೆಗಳಿಗೆ ನೀರು ಹರಿಸಿ ಜಿಲ್ಲೆಯಲ್ಲಿರುವ 116 ಕೆರೆಗಳನ್ನು ಭರ್ತಿಮಾಡಬೇಕೆಂದು ಆಗ್ರಹಿಸಿ ಅಖಂಡ ಕರ್ನಾಟಕ ರೈತ ಸಂಘದ ಕಾರ್ಯಕರ್ತರು ಗುರುವಾರ ಮುಖ್ಯ ಎಂಜಿನಿಯರ್ ಅವರಿಗೆ ಮನವಿ ಸಲ್ಲಿಸಿದರು.

ಸಂಘದ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಮಾತನಾಡಿ, ಕಳೆದ ತಿಂಗಳು ಕಾಲುವೆಗೆ ನೀರು ಹರಿಸಿದಾಗ 116 ಕೆರೆಗಳ ಪೈಕಿ ಅರ್ಧದಷ್ಟು ಮಾತ್ರ ಕೆರೆಗಳಿಗೆ ನೀರು ಸೇರಿದ್ದು ಮಧ್ಯದಲ್ಲಿ ರೈತರು ಹಳ್ಳಕ್ಕೆ ನೀರು ಹರಿಸಿದ ಪರಿಣಾಮ ಕೆಲವೊಂದು ಭಾಗದಲ್ಲಿ ಕೆರೆಗಳಿಗೆ ನೀರು ತಲುಪಿಲ್ಲ ಇದರಿಂದ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆ ಎದುರಾಗಿದೆ ಪ್ರತಿ ಬಾರಿಯು ನೀರು ಹರಿಸಿದ ಸಂದರ್ಭದಲ್ಲಿ ಕಾಲುವೆ ಕೊನೆಯ ಅಂಚಿನವರೆಗೆ ನೀರು ತಲುಪುವದಿಲ್ಲ ಇದರಿಂದ ಕೊನೆಯ ಭಾಗದ ರೈತರು ನೀರಿನಿಂದ ವಂಚಿತರಾಗಿದ್ದಾರೆ.ಈ ಬಾರಿ ಬಿಸಿಲಿನ ಪ್ರಖರತೆ ಹೆಚ್ಚಿರುವದರಿಂದ ಬಹುತೇಕ ಕೆರೆಗಳಲ್ಲಿಯ ನೀರು ಬತ್ತಿ ಹೋಗಿವೆ ಜಲಾಶಯದಲ್ಲಿ ಇನ್ನು ಒಟ್ಟು



ನೀರಿನ ಸಂಗ್ರಹ 30 ಟಿಎಂಸಿ ಅಡಿ ನೀರು ಇದೆ ಅದರಲ್ಲಿ 17 ಟಿಎಂಸಿ ಅಡಿ ಬಳಕೆಗೆ ನಿರ್ಭಂದದ ನೀರು ಹೊರತು ಪಡಿಸಿದರು ಬಳಕೆಗೆ ಇನ್ನೂ 13 ಟಿ.ಎಮ್.ಸಿ ಅಡಿ ನೀರು ಲಭ್ಯ ವಿದೆ .ಅದರಲ್ಲಿ ಕೇವಲ 1.5 ಟಿಎಂಸಿ ಅಡಿ ನೀರು ಹರಿಸಿದರೇ ಜಿಲ್ಲೆಯ ಎಲ್ಲಾ ಕೆರೆಗಳು ಭರ್ತಿಯಾಗಲಿವೆ ಎಂದರು.

ಈ ಹಿಂದೆ ನಡೆಸಿದ ನೀರಾವರಿ ಸಲಹಾ ಸಮೀತಿ ಸಭೆಯಲ್ಲಿ ಬೇಸಿಗೆಯ ಸಂದರ್ಭದಲ್ಲಿ ಒಟ್ಟು 3 ಬಾರಿ ನೀರು ಹರಿಸಲು ತೀರ್ಮಾನಿಸಲಾಗಿದ್ದು ಈ ಸಭೆಯ ನಿರ್ಣಯದಂತೆ ಮೇ ತಿಂಗಳು ಮೊದಲನೆಯ ವಾರದಲ್ಲಿ ನೀರು ಹರಿಸಲು ಪ್ರಾರಂಭಿಸಬೇಕಿತ್ತು ಎಂದರು.

ಬಸವನಬಾಗೇವಾಡಿ ಶಾಖಾ ಕಾಲುವೆಗೆ ತುರ್ತಾಗಿ ನೀರು ಹರಿಸಿ ಕೊನೆಯು ಅಂಚಿನವರೆಗೆ ನೀರು ತಲುಪುವಂತೆ ಕ್ರಮ ವಹಿಸಬೇಕು ಇಲ್ಲದಿದ್ದರೆ ಕಛೇರಿ ಮುಂದುಗಡೆ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಬೇಕಾಗುತ್ತದೆಂದು ಅರವಿಂದ ಕುಲಕರ್ಣಿ ಎಚ್ಚರಿಕೆ ನೀಡಿದರು.

ತಾಂತ್ರಿಕ ಸಹಾಯಕ ಉಮೇಶ ಮನವಿ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ವಿಠಲ ಬಿರಾದಾರ, ಚಂದ್ರಶೇಖರ ಜಮ್ಮಲದಿನ್ನಿ ಭೀರಪ್ಪ ವಂದಾಲ,ರೇವಪ್ಪಗೌಡ ಪೋಲೆಶಿ, ಗುರುಲಿಂಗಪ್ಪ ಪಡಸಲಗಿ, ವಿಠಪ್ಪ ಗೋಡೇಕರ, ನಲ್ಲಪ್ಪ ಮನ್ಯಾಳ, ಲಾಲಸಾ ಹಳ್ಳೂರ ರಾಮಣ್ಣ ಮನ್ಯಾಳ, ಸಿದ್ಲಿಂಗಪ್ಪ ಬಿರಾದಾರ ಯಲ್ಲಪ್ಪ ಮನ್ಯಾಳ, ಲಾಳೇಸಾ ಕೆಳಗಿನಮನಿ, ರಾಜು ಬಿರಾದಾರ, ಬಂದಗಿಸಾಬ ಹಳ್ಳೂರ ಬಾಬು ಹಡಪದ, ದೇವಪ್ಪ ಪೋಲೆಶಿ ಶಿವರಾಜ ಗೋಡೆಕಾರ ಇದ್ದರು.

# ಎಸ್ಸೆಸ್ಸೆಲ್ಸಿ: ಬನಶಂಕರಿ ಪಬ್ಲಿಕ್ ಸ್ಕೂಲ್ ಅತ್ಯುತ್ತಮ ಸಾಧನೆ

**ಉದಯರಶ್ಮಿ ನ್ಯೂಸ್**

ನಿಡಗುಂದಿ:ಎಸ್‌ಎಸ್‌ಎಲ್‌ಸಿ -2024ರ ಪರೀಕ್ಷೆಯಲ್ಲಿ ಸ್ಥಳೀಯ ಬನಶಂಕರಿ ಪಬ್ಲಿಕ್ ಸ್ಕೂಲ್ & ಪಿ.ಯು ಕಾಲೇಜ್‌ನ ವಿದ್ಯಾರ್ಥಿಗಳ ಈ ಬಾರಿಯೂ ಸಹ ಉತ್ತಮ ಸಾಧನೆಯನ್ನು ಸಾಧಿಸಿದ್ದಾರೆ ಎಂದು ಸಂಸ್ಥೆಯ ಅಧ್ಯಕ್ಷ ಸತೀಶ. ಎಸ್. ಪಾಟೀಲ ತಿಳಿಸಿದ್ದಾರೆ.

ಅಲ್ಲದೇ ಕಳೆದ 3ಬ್ಯಾಚ್‌ಗಳಲ್ಲಿಯೂ ಶೇ.100ರಷ್ಟು ಫಲಿತಾಂಶ ಪಡೆಯುವಲ್ಲಿ ಶಿಕ್ಷಕರ ಪಾತ್ರ ಹಿರಿದು ಎಂದು ತಿಳಿಸಿದರು.



2024ರ ಪರೀಕ್ಷೆಯಲ್ಲಿ ಅರ್ಪಿತಾ ಮೋಕಾಶಿ (576/625) 92.16% ಪಡೆದು ಶಾಲೆಗೆ ಪ್ರಥಮಸ್ಥಾನದಲ್ಲಿದ್ದಾಳೆ. ಅನುಪ್ ಮೂರನಾಳ (574/625) 91.84% ಪಡೆದು ದ್ವಿತಿಯ ಸ್ಥಾನವನ್ನು ಪಡೆದಿರುತ್ತಾನೆ. ಸಾಧಿಕಾ ಪೆಂಡಾರಿ (532/625) 85.12% ಪಡೆದು 3ನೇ ಸ್ಥಾನವನ್ನು ಪಡೆದಿರುತ್ತಾಳೆ.

ಉತ್ತಮ ಅಂಕ ಗಳಿಸಿದ ಎಲ್ಲ ವಿದ್ಯಾರ್ಥಿಗಳಿಗೆ ಸಂಸ್ಥೆಯ ಕಾರ್ಯದರ್ಶಿ ನೀಲಾ ಎಸ್ ಪಾಟೀಲ, ಮುಖ್ಯ ಗುರುಗಳು ಮತ್ತು ಎಲ್ಲ ಶಿಕ್ಷಕವೃಂದ ಅಭಿನಂದನೆಗಳನ್ನು ತಿಳಿಸಿದ್ದಾರೆ.

# ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ಉತ್ತಮ ಸಾಧನೆ

**ಉದಯರಶ್ಮಿ ನ್ಯೂಸ್**ಇಂಡಿ: 2023-24 ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆಯ ಫಲಿತಾಂಶ ಪ್ರಕಟಗೊಂಡಿದ್ದು, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ವಿದ್ಯಾರ್ಥಿಗಳು ಅದ್ವಿತೀಯ ಸಾಧನೆಗೈದು ಶಾಲೆಯ ಕೀರ್ತಿ ಹೆಚ್ಚಿಸಿದ್ದಾರೆಂದು ಪ್ರಾಂಶುಪಾಲರು ಹಾಗೂ ಶಿಕ್ಷಕರು ಅಭಿನಂದನೆ ತಿಳಿಸಿದ್ದಾರೆ.

ತಾಲ್ಲೂಕಿನ ಅಂಜುಟಗಿ ಗ್ರಾಮದಲ್ಲಿ ಇರುವ ಕಿತ್ತೂರು ರಾಣಿ ಚೆನ್ನಮ್ಮ ವಸತಿಯ ಶಾಲೆಯ ವಿಧ್ಯಾರ್ಥಿನಿ ವೈಶಾಲಿ ಮಣ್ಣೂರ 608 ಅಂಕ ಪಡೆದು ಪ್ರಥಮಸ್ಥಾನ, ಅನುರಾಧ ಹಿರೇಮಾಳ 605 ಅಂಕ ಪಡೆದು ದ್ವಿತಿಯ ಸ್ಥಾನ, ಸುಪ್ರೀಯಾ ನಾಯಕ 599 ಹಾಗೂ ಅಕ್ಷತಾ ಹಳ್ಳದಮನಿ 599 ಅಂಕ ಪಡೆದು ತೃತೀಯ ಸ್ಥಾನ ಪಡೆದಿದ್ದಾರೆ. ಅದು ನಮ್ಮ ಶಾಲೆಗೆ ಕ್ರೈಸ್ ಗೆ ಅತ್ಯಂತ ಹೆಮ್ಮೆಯ ವಿಷಯವಾಗಿದೆ.



ವೈಶಾಲಿ ಮಣ್ಣೂರ 608 ಅಂಕ, ಅನುರಾಧ ಹಿರೇಮಾಳ 605 ಅಂಕ ಸುಪ್ರೀಯಾ ನಾಯಕ 599 ಅಂಕ ಅಕ್ಷತಾ ಹಳ್ಳದಮನಿ 599 ಅಂಕ

ಅದಲ್ಲದೇ ಪರೀಕ್ಷೆ ಬರೆದ ವಿದ್ಯಾರ್ಥಿಗಳ ಪೈಕಿ ಯಾರೊಬ್ಬರೂ ಅನುವುತ್ತೀರ್ಣರಾಗಿದೆ ಕ್ರೈಸ್ ಶಾಲೆಯ ಮೆರುಗು ಹೆಚ್ಚಿಸಿದ್ದಾರೆ.

ಈ ಸಂದರ್ಭದಲ್ಲಿ ಪ್ರಾಂಶುಪಾಲ ಚನ್ನಪ್ಪ ಸೇಠೆ ಹಾಗೂ ನಿಲಯಪಾಲಕ ಸಂಜೀವ್ ಕುಮಾರ್ ಹಿರೋಳ ಹಾಗೂ ಎಲ್ಲಾ ಶಿಕ್ಷಕ ಸಿಬ್ಬಂದಿ ವರ್ಗ ಅಭಿನಂದನೆ ಸಲ್ಲಿಸಿದ್ದಾರೆ.

# ಮೇ.19ರಂದು ಪ್ರವೇಶ ಪರೀಕ್ಷೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳ 2024-25ನೇ ಶೈಕ್ಷಣಿಕ ಸಾಲಿನ 6ನೇ ತರಗತಿಯ ಪ್ರವೇಶಕ್ಕಾಗಿ ಮೇ.19ರಂದು ಪ್ರವೇಶ ಪರೀಕ್ಷೆ ನಡೆಯಲಿದೆ. ಪ್ರವೇಶ ಪತ್ರವನ್ನು ಅರ್ಜಿ ಸಲ್ಲಿಸಿದ ಆಯಾ ತಾಲೂಕಿನ ವಸತಿ ಶಾಲೆಯಲ್ಲಿ ಪಡೆಯಬಹುದಾಗಿದೆ.

ಪ್ರವೇಶ ಪರೀಕ್ಷೆಗಳು ನಡೆಯುವ ಕೇಂದ್ರಗಳ ವಿಳಾಸ ಹಾಗೂ ಪ್ರಾಂಶುಪಾಲರ ಸಂಪರ್ಕ ಸಂಖ್ಯೆ:

ತಿಕೋಟಾದ ಡಾ. ಎ.ಪಿ.ಜೆಅಬ್ದುಲ್ ಕಲಾಂ ವಸತಿಶಾಲೆ, ಅರಕೇರಿ (8971459683), ಸರಕಾರಿ ಮುಸ್ಲಿಂ ವಸತಿ ಶಾಲೆ ಅಫಜಲಪುರಟಕ್ಕೆ ವಿಜಯಪುರ (8310830407) ಚಡಚಣ ತಾಲೂಕಿನ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಲಹಳ್ಳಿ (9620828185) ಸಿಂದಗಿಯ ಎಚ್. ಜಿ. ಪಿಯು ಕಾಲೇಜು ವಿವೇಕಾನಂದ ಸರ್ಕಲ್ ಸಿಂದಗಿ, ಹೆಚ್.ಟಿ. ಕುಲಕರ್ಣಿ, ಪ್ರೌಢಶಾಲೆ, ಸಿಂದಗಿ(9980952960), ಶಾಂತೇಶ್ವರ ಪಿಯು ಕಾಲೇಜು ಬಸ್‌ಸ್ಟ್ಯಾಂಡ್ ಹತ್ತಿರ ಮಿನಿವಿಧಾನಸೌಧ ಇಂಡಿ (7892371709), ಅಭ್ಯುದಯ ಆಂಗ್ಲ ಮಾಧ್ಯಮ ಶಾಲೆ ಮುದ್ದೇಬಿಹಾಳ (7259179398), ಎಂ.ಜಿ.ಎಂ.ಕೆ ಆಂಗ್ಲ ಮಾಧ್ಯಮ ಶಾಲೆ ಮುದ್ದೇಬಿಹಾಳ (9844493306).

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಛೇರಿ, ವಿಜಯಪುರ 08352-295523, ತಾಲೂಕು ಮಾಹಿತಿ ಕೇಂದ್ರ, ವಿಜಯಪುರ 8123710766, ತಾಲೂಕು ಮಾಹಿತಿ ಕೇಂದ್ರ, ಬ.ಬಾಗೇವಾಡಿ 9972340721, ತಾಲೂಕು ಮಾಹಿತಿ ಕೇಂದ್ರ, ಮುದ್ದೇಬಿಹಾಳ 8722445552, 5 ತಾಲೂಕು ಮಾಹಿತಿ ಕೇಂದ್ರ, ಇಂಡಿ 9900109759, 6 ತಾಲೂಕು ಮಾಹಿತಿ ಕೇಂದ್ರ, ಸಿಂದಗಿ 9035558609 ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರು ಸಂಘಟಿತರಾಗದಿದ್ದರೆ ಪರಿಸ್ಥಿತಿ ಗಂಭೀರ :ಪಾಟೀಲ

**ಉದಯರಶ್ಮಿ ನ್ಯೂಸ್**

ಇಂಡಿ: ಪ್ರಕೃತಿಯೂ ರೈತರಿಗೆ ತೊಂದರೆ ಕೊಡುತ್ತಿದೆ. ಅತೀವೃಷ್ಟಿ, ಅನಾವೃಷ್ಟಿ ಹೊಡೆತಕ್ಕೆ ರೈತರು ಕಂಗಾಲಾಗಿದ್ದಾರೆ. ಜಿಲ್ಲೆಯಲ್ಲಿ ರೈತರ ಜ್ವಲಂತ ಸಮಸ್ಯೆಗಳಿವೆ. ಅದಕ್ಕೆ ರೈತರ ಗಟ್ಟಿ ಧ್ವನಿಯಾಗಿ ಸರಕಾರ ಗಮನ ಸೆಳೆಯಬೇಕು ಎಂದು ಪುರಸಭೆ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಭೀಮನಗೌಡ ಪಾಟೀಲ ಹೇಳಿದರು.



ಬುಧವಾರ ಪಟ್ಟಣದ ಸಿಂದಗಿ ರಸ್ತೆಯಲ್ಲಿರುವ ಅಕ್ಕ ಮಹಾದೇವಿ ಬ್ಯಾನರ್ ಕಾರ್ಯಾಲಯದಲ್ಲಿ, ರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ವಿಜಯಪುರ ಜಿಲ್ಲೆಯ ನೂತನ ಅಧ್ಯಕ್ಷ ಎಸ್ ಬಿ ಕೆಂಬೋಗಿ ಅವರಿಗೆ "ಸ್ನೇಹ ಸಂಗಮ" ಸ್ನೇಹಿತರ ಬಳಗದಿಂದ ಸನ್ಮಾನಿಸಿ ಮಾತನಾಡಿದರು.

ಇಂದು ಬಿತ್ತನೆಯ ಬೀಜ, ಗೊಬ್ಬರದಿಂದ ಹಿಡಿದು ಮಾರುಕಟ್ಟೆಯವರೆಗೂ ರೈತರಿಗೆ ಅನ್ಯಾಯವಾಗುತ್ತಿದೆ. ರೈತರು ಸಂಘಟನೆಯಾಗದಿದ್ದರೆ ಪರಿಸ್ಥಿತಿ ತುಂಬಾ ಗಂಭೀರವಾಗುತ್ತಿದೆ.

ಇಂದು ರೈತರು ಸಮಸ್ಯೆಗಳು ಬೆಟ್ಟದಷ್ಟು, ಬೃಹದಾಕಾರವಾಗಿ ಬೆಳೆದಿವೆ. ಅದಲ್ಲದೇ ಬೇರೆ-ಬೇರೆ ತಿರುವು ಪಡೆದು ರಾಜಕೀಯ ಸ್ವರೂಪ ಪಡೆಯುತ್ತಿವೆ ಎಂದು ಕಳವಳ ವ್ಯಕ್ತಪಡಿಸಿದರು.

ಮುಖಂಡ ಪಾಪು ಕಿತಲಿ ಮಾತನಾಡಿ ರೈತರು ಇಂದು ಕೃಷಿ ಕಸುಬು ತೊರೆದು ಬೇರೆ ವೃತ್ತಿಯತ್ತ ಮುಖಮಾಡುವ ಪರಿಸ್ಥಿತಿ ಎದುರಿಸುತ್ತಿದ್ದಾರೆ. ನಮ್ಮ ವಿಜಯಪುರ ಜಿಲ್ಲೆಯಲ್ಲಿ ದೊಡ್ಡ ಮಟ್ಟದ ಸಮಸ್ಯೆಗಳು ಪ್ರತಿ ವರ್ಷ ರೈತರು ಅನುಭವಿಸುತ್ತಿದ್ದಾರೆ. ರೈತರಿಗೆ ಸರಿಯಾದ ಸಮಯಕ್ಕೆ ಬೀಜ ರಸಗೊಬ್ಬರ ಮತ್ತು ಸರಕಾರದ ಸಹಾಯ ಸಹಕಾರ ಮಾರ್ಗದರ್ಶನ ಸಿಗಬೇಕು. ಅದಲ್ಲದೇ ಕಳಪೆ ಬೀಜ ಮತ್ತು ರಸಗೊಬ್ಬರ ಮಾರಾಟ ಮಾಡುವ ಮತ್ತು ಕೃಷಿ ಜ್ಞಾನ ವಿಲ್ಲದ ಅನೇಕ ಅಂಗಡಿಕಾರರು ಇದ್ದಾರೆ. ಅವರಿಂದ ರೈತರಿಗೆ ಸರಿಯಾದ ಮಾರ್ಗದರ್ಶನ ಸಿಗದೆ ಬೆಳೆ ಹಾನಿ ಅನುಭವಿಸುವ ಕಷ್ಟದ ಪರಿಸ್ಥಿತಿ ಇದೆ. ಹಾಗಾಗಿ ಇಂತಹ ಎಲ್ಲಾ ಸಮಸ್ಯೆಗಳಿಗೆ ಇತಿಶ್ರೀ ಹೇಳಲು ಗಟ್ಟಿಯಾದ ರೈತ ಸಂಘಟನೆ ಅವಶ್ಯಕತೆ ಇದೆ ಎಂದು ಹೇಳಿದರು.

ಇನ್ನೋರ್ವ ಮುಖಂಡ ಮಲ್ಲಿಕಾರ್ಜುನ ವಾಲಿಕಾರ ಮಾತನಾಡಿದ ಅವರು, ರಾಜಕೀಯ ಪಕ್ಷಗಳಿಗೆ ಚುನಾವಣೆ ಬಂದಾಗ ಮಾತ್ರ ರೈತರು ನೆನಪು ಮಾಡಿಕೊಳ್ಳುತ್ತಾರೆ. ರೈತರು ಒಂದು ವೇಳೆ ಕಸುಬು ಬಿಟ್ಟು ನಿಂತರೆ ಪರಿಸ್ಥಿತಿ ಏನಾಗುತ್ತದೆ ಎಂದು ಊಹಿಸ ಕೊಂಡರೆ ಅರ್ಥವಾಗುತ್ತೆ. ಹಾಗಾಗಿ ರೈತರು ಸಂಘಟಿತರಾದಾಗ ಮಾತ್ರ ಸರಕಾರದ ಸೌಲಭ್ಯಗಳು ದೊರೆಯುತ್ತವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ "ಸ್ನೇಹ ಸಂಗಮ" ಸ್ನೇಹಿತರು ಮಲ್ಲಿಕಾರ್ಜುನ ಹಾವಿನಾಳಮಠ, ಶಿಕ್ಷಕ, ಸಾಹಿತಿ ಧಶರಥ ಕೋರಿ, ಪತ್ರಕರ್ತ ಶಂಕರ್ ಜಮಾದಾರ ಹಾಗೂ ಇನ್ನೂ ಅನೇಕ ಮುಖಂಡರು ಉಪಸ್ಥಿತರಿದ್ದರು.

# ಡಿಪ್ಲೋಮಾ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: 2024-25 ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಪಾಸಾದ ವಿದ್ಯಾರ್ಥಿಗಳಿಂದ ಡಿಪ್ಲೋಮಾ ಪ್ರವೇಶಾತಿಗಾಗಿ ಆಫ್ ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ. ಭರ್ತಿ ಮಾಡಿದ ಅರ್ಜಿಗಳನ್ನು ಸರಕಾರಿ ಪಾಲಿಟೆಕ್ನಿಕ್ ಕಾಲೇಜಿನ ಕಾರ್ಯಾಲಯದಲ್ಲಿ ಸಲ್ಲಿಸಬಹುದಾಗಿದೆ. ಮೇ.14 ಕೊನೆಯ ಅರ್ಜಿ ಸಲ್ಲಿಕೆಗೆ ಕೊನೆಯ ದಿನವಾಗಿದೆ. ಮೆರಿಟ್ ಮೇಲೆ ಆಯ್ಕೆಯಾದ ಆಯ್ಕೆಯಾದ ವಿದ್ಯಾಥಿಗಳು ಪಟ್ಟಿಯನ್ನು ಮೇ.15 ರಂದು ಕಾಲೇಜಿನ ಸೂಚನಾ ಫಲಕದಲ್ಲಿ ಪ್ರದರ್ಶಿಸಲಾಗುವುದು. ಮೇ.16 ಆಯ್ಕೆಯಾದ ವಿಧ್ಯಾರ್ಥಿಗಳು ಮೂಲ ದಾಖಲೆ ಹಾಗೂ ಶುಲ್ಕದೊಂದಿಗೆ ಪ್ರವೇಶಾತಿಯನ್ನು ಪಡೆಯಲು ಕೊನೆಯ ದಿನಾವಾಗಿದೆ ಎಂದು ಸರಕಾರಿ ಪಾಲಿಟೆಕ್ನಿಕ್ ವಿಜಯಪುರದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್ಸಿ ವಿದ್ಯಾರ್ಥಿಗಳಿಗೆ 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಅಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಪ್ರತಿಭಾವಂತ ಪರಿಶಿಷ್ಟ ಜಾತಿ, ಸೇರಿರುವ 6ನೇ ತರಗತಿ ವಿದ್ಯಾರ್ಥಿಗಳನ್ನು ವಿಜಯಪುರ ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಲ್ಲಿ 2024-25ನೇ ಶೈಕ್ಷಣಿಕ ಸಾಲಿಗೆ ಪ್ರವೇಶ ಕಲ್ಪಿಸಲು ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು ಮೇ.21 ರೊಳಗೆ ಆನ್ ಲೈನ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಆಯ್ಕೆಯನ್ನು ಪ್ರವೇಶ ಪರೀಕ್ಷೆ ಮೂಲಕ ಮಾಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ ವಿಜಯಪುರ ಸಂಪರ್ಕಿಸಬಹುದಾಗಿದೆ ಎಂದು ಉಪ ನಿರ್ದೇಶಕರಾದ ಪುಂಡಲಿಕ್ ಮಾನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀಬಸವಶ್ರೀ ಪ್ರಶಸ್ತಿ ವಿತರಣಾ ಸಮಾರಂಭ ಇಂದು

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಪಟ್ಟಣದ ಬಸವ ಶರಣಸಂಗಮ ಸೇವಾ ಸಮಿತಿಯ ಅಡಿಯಲ್ಲಿ ದಿ:10 ಶುಕ್ರವಾರದಂದು ಬಸವ ಜಯಂತ್ಯುತ್ಸವ ಹಾಗೂ ಶ್ರೀಬಸವಶ್ರೀ ಪ್ರಶಸ್ತಿ ವಿತರಣಾ ಸಮಾರಂಭ ಜರುಗಲಿದೆ.

ಪಟ್ಟಣದ ಬಸವೇಶ್ವರ ವೃತದಲ್ಲಿ ಬೆಳಿಗ್ಗೆ ಭಾವಚಿತ್ರಕ್ಕೆ ಪೂಜೆ ಜರುಗಲಿದೆ. ನಂತರ ಸಾಯಂಕಾಲ ಶ್ರೀಸಿದ್ಧೇಶ್ವರ ಸ್ವಾಮೀಜಿ ವಸತಿ ಶಾಲೆಯ ಆವರಣದಲ್ಲಿ ಸಭಾ ಕಾರ್ಯಕ್ರಮ ಜರುಗಲಿದೆ. ಸಭಾ ಕಾರ್ಯಕ್ರಮದಲ್ಲಿ ಸ್ಥಳೀಯ ಗದ್ದಿಗೆಮಠದ ಮಡಿವಾಳೇಶ್ವರ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದಾರೆ. ಇದೇ ಸಂದರ್ಭದಲ್ಲಿ ವಿವಿಧ ರಂಗಗಳಲ್ಲಿ ಸಾಧನೆ ಮಾಡಿದ ಮಹನೀಯರಿಗೆ 'ಶ್ರೀಬಸವಶ್ರೀ' ಪ್ರಶಸ್ತಿ ಹಾಗೂ ಇತರ ಗಣ್ಯರಿಗೆ ಸನ್ಮಾನಿಸಿ ಗೌರವಿಸಲಾಗುತ್ತಿದೆ ಎಂದು ಅಧ್ಯಕ್ಷ ಸಂಗಪ್ಪ ತಡವಲ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಬಸವ & ಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ ಸರಳ ಆಚರಣೆ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದ ತಹಸೀಲ್ದಾರ ಕಚೇರಿಯ ಸಭಾಂಗಣದಲ್ಲಿ ಮೇ.10 ರಂದು ಬೆಳಗ್ಗೆ 10.30 ಗಂಟೆಗೆ ತಾಲೂಕಾಡಳಿತದಿಂದ ಸಾಂಸ್ಕೃತಿಕ ನಾಯಕ ವಿಶ್ವಗುರು, ಮಹಾಮಾನವತಾವಾದಿ ಬಸವಣ್ಣನವರ ಜಯಂತಿ ಹಾಗೂ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಅವರ ಜಯಂತಿ ಕಾರ್ಯಕ್ರಮವನ್ನು ಸರ್ಕಾರದ ಆದೇಶನ್ವಯ ಲೋಕಸಭಾ ಚುನಾವಣೆಯ ನೀತಿ ಸಂಹಿತೆಯ ಇನ್ನೂ ಜಾರಿಯಲ್ಲಿರುವುದರಿಂದ ಸರಳವಾಗಿ, ಸಾಂಕೇತಿಕವಾಗಿ, ಅರ್ಥಪೂರ್ಣವಾಗಿ ಆಚರಿಸಲಾಗುವುದು. ಈ ಜಯಂತಿ ಕಾರ್ಯಕ್ರಮಕ್ಕೆ ಎಲ್ಲ ಸರ್ವ ಸಮಾಜ ಬಾಂಧವರು, ಬಸವ ಭಕ್ತರು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಆಗಮಿಸಬೇಕೆಂದು ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಸವ ಜಯಂತಿಗೆ ಬಸವನಾಡು ಸಜ್ಜು :ಉತ್ಸವಕ್ಕೆ ಕ್ಷಣಗಣನೆ

**ಉದಯರಶ್ಮಿ ನ್ಯೂಸ್**

*- ಬಸವರಾಜ ನಂದಿಹಾಳ*

ಬಸವನಬಾಗೇವಾಡಿ: ಸಮಾಜ ಸುಧಾರಕ, ದಾರ್ಶನಿಕ, ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಜಯಂತಿ ಮೇ.10 ರಂದು ಇರುವ ಹಿನ್ನೆಲೆಯಲ್ಲಿ ಬಸವ ಜನಿಸಿದ ಬಸವನಬಾಗೇವಾಡಿಯ ಪಟ್ಟಣದಲ್ಲಿ ಬಸವ ಜಯಂತಿ ಆಚರಣೆಗೆ ಕ್ಷಣಗಣನೆ ಆರಂಭವಾಗಿದೆ.

ಕಳೆದ ಕೆಲ ದಿನಗಳಿಂದ ಬಸವ ಜನ್ಮಸ್ಮಾರಕ, ಬಸವೇಶ್ವರ ದೇವಸ್ಥಾನದಲ್ಲಿ ಮಂಡಳಿಯ ಸಿಬ್ಬಂದಿ ಸ್ವಚ್ಛತೆಯಲ್ಲಿ ತೊಡಗಿರುವದು ಕಂಡುಬಂದಿತ್ತು. ಬಸವೇಶ್ವರ ದೇವಸ್ಥಾನ, ಬಸವಜನ್ಮ ಸ್ಮಾರಕ ಸೇರಿದಂತೆ ಬಸವೇಶ್ವರ ವೃತ್ತದಲ್ಲಿರುವ ಅಶ್ವಾರೂಢ ಬಸವೇಶ್ವರರ ಪ್ರತಿಮೆಯ ಸುತ್ತ ವಿದ್ಯುದೀಪದ ಅಲಂಕಾರ ಮಾಡಲಾಗಿದೆ.

ನಾಡಿನಲ್ಲಿ ಅಕ್ಷಯ ತೃತೀಯ ಬಸವ ಜಯಂತಿಯಂದು ಶುಭ ಕಾರ್ಯ ಸೇರಿದಂತೆ ಚಿನ್ನದ ಖರೀದಿಯಲ್ಲಿ ಜನರು ತೊಡಗುತ್ತಾರೆ. ಬಸವ ಜಯಂತಿ ಬರುವದೇ ನಾಡಿಗೆ ದೊಡ್ಡ ಸಡಗರ, ಸಂಭ್ರಮ. ಬಸವ ಜಯಂತಿಯನ್ನು ಜನರು ಶ್ರದ್ಧಾ ಭಕ್ತಿಯಿಂದ ಆಚರಿಸುವದು ವಿಶೇಷ. ಬಸವೇಶ್ವರರ ತತ್ವ ಗಳನ್ನು ಜಗತ್ತಿನಲ್ಲಿ ಅಳವಡಿಸಿಕೊಳ್ಳುವದು ತುಂಬಾ ಮುಖ್ಯವಾಗಿದೆ. ಇಂದು ಜಗತ್ತಿನ ಅನೇಕ ಜ್ವಲಂತ ಸಮಸ್ಯೆಗಳಿಗೆ ಬಸವೇಶ್ವರರ ಸಂದೇಶಗಳು ಪರಿಹಾರ ನೀಡುತ್ತವೆ. ಇವು ಜಗತ್ತಿನಲ್ಲಿ ಪ್ರಸಾರವಾಗಿ ಅವು ಜಾರಿಗೆ ಬರಬೇಕಿದೆ. ಇಂದು ಕೇವಲ ಬಸವೇಶ್ವರರ ಹೆಸರನ್ನು ಹೇಳಿಕೊಂಡು ಬೆಳೆಯುತ್ತಿದ್ದಾರೆ ವಿನಃ ಅವರ ತತ್ವಗಳು ತತ್ವಗಳಾಗಿಯೇ ಉಳಿಯುತ್ತಿರುವದು ವಿಪರ್ಯಾಸ. ಈ ವರ್ಷ ರಾಜ್ಯದಲ್ಲಿ ಲೋಕಸಭಾ ಚುನಾವಣೆಯ ನೀತಿ ಸಂಹಿತೆ ಇರುವದರಿಂದಾಗಿ ಬಸವ ಜಯಂತಿ ಕಾರ್ಯಕ್ರಮ ಎಲ್ಲೆಡೆ ಸರಳವಾಗಿ ಆಚರಣೆ ಆಗುತ್ತಿದೆ.



ಬಸವ ಜಯಂತಿ ಅಂಗವಾಗಿ ಕೂಡಲಸಂಗಮ ಅಭಿವೃದ್ದಿ ಮಂಡಳಿಯು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಬಸವ ಜಯಂತಿ ಅಂಗವಾಗಿ ಬಸವೇಶ್ವರ ದೇವಸ್ಥಾನದಲ್ಲಿ ಮುಂಜಾನೆ 7.30 ಗಂಟೆಗೆ ಸ್ಥಳೀಯ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿಯವರು ಷಟ್ಥಲ ಧ್ವಜಾರೋಹಣ ನೆರವೇರಿಸುವ ಮೂಲಕ ಬಸವ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡುವರು. ನಂತರ ಬಸವ ಜನ್ಮಸ್ಮಾರಕದಲ್ಲಿ ಬೆಳಗ್ಗೆ 10.30 ಗಂಟೆಗೆ ಬಸವೇಶ್ವರರ ತೊಟ್ಟಿಲು ಹಾಗೂ ನಾಮಕರಣ ಕಾರ್ಯಕ್ರಮ ಮುರುಘೇಂದ್ರ ಸ್ವಾಮೀಜಿ, ಸಿದ್ದಲಿಂಗ ಸ್ವಾಮೀಜಿ ಸಾನಿಧ್ಯದಲ್ಲಿ ಜರುಗಲಿದೆ. ನಂತರ ಮಹಾಪ್ರಸಾದ ನಡೆಯಲಿದೆ.

ಸಂಜೆ 5 ಗಂಟೆಗೆ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಬಸವ ಜಯಂತಿ ಅಂಗವಾಗಿ ಕೂಡಲಸಂಗಮ ಅಭಿವೃದ್ಧಿ ಮಂಡಳಿಯು ಬಸವ ಚಿಂತನ ಸಮಾವೇಶ ಹಾಗೂ ವಚನ ಸಂಗೀತೋತ್ಸವ ಕಾರ್ಯಕ್ರಮ ಹಮ್ಮಿಕೊಂಡಿದೆ. ಸಾನಿಧ್ಯವನ್ನು ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ವಹಿಸುವರು. ಅತಿಥಿ ಉಪನ್ಯಾಸಕರಾಗಿ ಚಿಕ್ಕನಾಯಕನಹಳ್ಳಿಯ ವಿಮರ್ಶಕ, ಚಿಂತಕ ಪ್ರೊ. ಎಸ್.ಜಿ.ಸಿದ್ದರಾಮಯ್ಯನವರ, ವಿರೇಶ ವಾಲಿ, ಕುಮಾರಿ ಸಾಕ್ಷಿ ಹಿರೇಮಠ ಅವರಿಂದ ವಚನ ಸಂಗೀತ ನಡೆಯಲಿದೆ. ಬೆಂಗಳೂಇರನ ನವ್ಯ ನಾಟ್ಯಸಂಗಮ ತಂಡದಿಂದ ಭಕ್ತಿ ಭಂಡಾರಿ ಬಸವಣ್ಣನವರ ನೃತ್ಯ ರೂಪಕ ಜರುಗಲಿದೆ. ನಂತರ 9.30 ಗಂಟೆಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಬಸವೇಶ್ವರರ ಅಲಂಕೃತ ಪಲ್ಲಕ್ಕಿ ಉತ್ಸವ ಹಾಗೂ ಬಸವೇಶ್ವರರ ಭಾವಚಿತ್ರದ ಮೆರವಣಿಗೆ ಸಕಲ ವಾದ್ಯ ಮಂಗಲ ವೈಭವದೊಂದಿಗೆ ಜರುಗಲಿದೆ ಎಂದು ಕೂಡಲಸಂಗಮ ಅಭಿವೃದ್ಧಿ ಮಂಡಳಿಯ ಆಯುಕ್ತ ನಿಂಗಪ್ಪ ಬಿರಾದಾರ ಹೇಳಿದರು.

# ನಂದಿ ಪ್ರೌಢಶಾಲೆಗೆ ಉತ್ತಮ ಫಲಿತಾಂಶ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದ ಮಸಬಿನಾಳ ರಸ್ತೆಯಲ್ಲಿರುವ ನಂದಿ ಪ್ರೌಢಶಾಲೆಯಲ್ಲಿ ಎಸ್‌ಎಸ್‌ಎಲ್ಸಿ ವ್ಯಾಸಂಗ ಮಾಡುತ್ತಿದ್ದ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡುವ ಮೂಲಕ ಶಾಲೆಗೆ ಉತ್ತಮ ಫಲಿತಾಂಶ ನೀಡಿದ್ದಾರೆ. ಈ ಪ್ರೌಢಶಾಲೆಯಲ್ಲಿ 15 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದರು. ಇದರಲ್ಲಿ 14 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.



ಅಮೃತಾ ರಾಠೋಡ ಶೇ. 91, ಸಹನಾ ಅವಟಿ ಶೇ. 89, ಶ್ರವಣಕುಮಾರ ಅರಕೇರಿ ಶೇ. 86 ಅಂಕ ಪಡೆದುಕೊಂಡಿದ್ದಾರೆ.ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ, ಶಿಕ್ಷಕರಿಗೆ ಅಭಿನಂದನೆಗಳನ್ನು ಶಾಲೆಯ ಮುಖ್ಯಸ್ಥ ಬಸವರಾಜ ಪೂಜಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜ್ಞಾನ ಭಾರತಿ ಪ್ರೌಢ ಶಾಲೆ ಉತ್ತಮ ಸಾಧನೆ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಪಟ್ಟಣದ ಜ್ಞಾನ ಭಾರತಿ ಪ್ರೌಢ ಶಾಲೆಯ ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ್ದಾರೆ. ನಾಜಮಿನ ನಾಯ್ಕೋಡಿ 559 (ಶೇ.89.44) ಅಂಕಗಳಿಸಿ ಶಾಲೆಗೆ ಪ್ರಥಮ, ಭಾಗ್ಯಶ್ರೀ ಬಿರಾದಾರ ಮತ್ತು ಸರಸ್ವತಿ ಬಿರಾದಾರ ತಲಾ 526 (ಶೇ.84.16) ಅಂಕಗಳಿಸಿ ಶಾಲೆಗೆ ದ್ವಿತೀಯ, ಮತ್ತು ಸಂಜನಾ ಪಾಟೀಲ 524 (ಶೇ.83.84) ಅಂಕಗಳಿಸಿ ಶಾಲೆಗೆ ತೃತೀಯ ಸ್ಥಾನವನ್ನು ಪಡೆದು ಸಾಧನೆ ಮಾಡಿದ್ದಾರೆ



# ರವೀಂದ್ರನಾಥ ಠಾಗೋರ್ ಶಾಲೆ ವಿದ್ಯಾರ್ಥಿಗಳ ಉತ್ತಮ ಸಾಧನೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ರಾಜ್ಯದಲ್ಲಿ ಇಂದು ಎಸ್ ಎಸ್ ಎಲ್ ಸಿ ಪರೀಕ್ಷೆ ಫಲಿತಾಂಶ ಪ್ರಕಟಗೊಂಡಿದೆ. ವಿಜಯಪುರ ನಗರದ ಪ್ರತಿಷ್ಠಿತ ಛತ್ರಪತಿ ಶಿವಾಜಿ ಮಹಾರಾಜರ ಶಿಕ್ಷಣ ಸಂಸ್ಥೆಯ ರವೀಂದ್ರನಾಥ ಠಾಗೋರ್ ಕನ್ನಡ ಮಾಧ್ಯಮ ಶಾಲೆಯು 100 ಕ್ಕೆ 98% ರಷ್ಟು ಸಾಧನೆ ಮಾಡಿದೆ. ಶಾಲೆಯ ಒಟ್ಟು 38 ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಿದ್ದರು. ಪರೀಕ್ಷೆಯಲ್ಲಿ ಕಲ್ಪನಾ ಗುರವ್ ಎಂಬ ವಿದ್ಯಾರ್ಥಿನಿ 579 ಅಂಕ ಗಳಿಸಿ ಶೇ.92.64 ಪ್ರತಿಶತದೊಂದಿಗೆ ಶಾಲೆಗೆ ಪ್ರಥಮ ರ್‍ಯಾಂಕ್ ಗಳಿಸಿದ್ದಾಳೆ. ಮಲ್ಲಿಕಾರ್ಜುನ ಬ್ಯಾಲ್ಯಾಳ್ ಎಂಬ ವಿದ್ಯಾರ್ಥಿ



578 ಅಂಕ ಗಳಿಸಿ ಶೇ.92.48% ಪ್ರತಿಶತದೊಂದಿಗೆ ಶಾಲೆಗೆ ಎರಡನೇ ರ್‍ಯಾಂಕ್ ಪಡೆದಿದ್ದಾನೆ . ಪ್ರತೀಕ್ಷಾ ಕಾಂಬಳೆ ಎಂಬ ವಿದ್ಯಾರ್ಥಿನಿ ಶೇ. 92.% ಪ್ರತಿಶತದೊಂದಿಗೆ 575 ಅಂಕ ಪಡೆದು ಮೂರನೇ ರ್‍ಯಾಂಕ್ ಪಡೆದಿದ್ದಾಳೆ. ಪ್ರಫುಲ್ ವಾಲಿಕಾರ ಎಂಬ ವಿದ್ಯಾರ್ಥಿ 572 ಅಂಕ ಪಡೆದು ಶೇ.91.52% ಪ್ರತಿಶತ ಪಡೆದು ನಾಲ್ಕನೆಯ ಸ್ಥಾನ ಪಡೆದಿದ್ದಾನೆ . 15 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್ ನಲ್ಲಿ ಉತ್ತೀರ್ಣರಾಗಿದ್ದು 12 ವಿದ್ಯಾರ್ಥಿ ಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ಅದೇರೀತಿ 10 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಚೇರ್ಮನ್ ಶಿವಾಜಿ ಗಾಯಕವಾಡ, ಸಂಸ್ಥಾಪಕ ಚೇರ್ಮನ್ ವಸಂತ ಗಾಯಕವಾಡ, ಕಾರ್ಯದರ್ಶಿ ರೀತಾ ಗಾಯಕವಾಡ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಶ್ಲಾಘಿಸಿ ಅಭಿನಂಧಿಸಿದ್ದಾರೆ. ಹಾಗೂ ವಿದ್ಯಾರ್ಥಿಗಳ ಸಾಧನೆಗೆ ಪ್ರೋತ್ಸಾಹಿಸಿದ ಮುಖ್ಯಗುರುಗಳಿಗೆ , ಶಿಕ್ಷಕರಿಗೆ ಹಾಗೂ ಶಾಲೆಯ ಸಿಬ್ಬಂದಿ ವರ್ಗದವರಿಗೆ ಅಭಿನಂಧಿಸಿದ್ದಾರೆ.

# ಶ್ರದ್ಧಾ ಶಿಕ್ಷಣ ಸಂಸ್ಥೆ ವಿದ್ಯಾರ್ಥಿಗಳ ಉತ್ತಮ ಸಾಧನೆ

**ಉದಯರಶ್ಮಿ ನ್ಯೂಸ್**

ಚಡಚಣ: 2023-2024 ನೇ ಶೈಕ್ಷಣಿಕ ವರ್ಷದ ಎಸ್.ಎಸ್.ಎಲ್.ಸಿ ಪರೀಕ್ಷಾ ಫಲಿತಾಂಶ ಪ್ರಕಟವಾಗಿದ್ದು, ಚಡಚಣ ತಾಲೂಕಿನ ನಿವರಗಿಯ ಶ್ರದ್ಧಾ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದಾರೆ.

ಶಾಲೆಯ ವಿದ್ಯಾರ್ಥಿನಿ ಕುಮಾರಿ ಪ್ರತಿಭಾ ಮಲ್ಲಿಕಾರ್ಜುನ ತೆಲಗಾಂವ 91.68% ಜೊತೆಗೆ ಕನ್ನಡ ವಿಷಯದಲ್ಲಿ 125 ಕ್ಕೆ 125 ಅಂಕಗಳನ್ನು ಪಡೆದಿದ್ದಾಳೆ, ಕುಮಾರ ಭೀಮಾಶಂಕರ ಚನ್ನಬಸು ಮನಗೇನಿ 86.88%, ಅಂಬಿಕಾ ಮಲ್ಲಪ್ಪ ಖತಾಳೆ 75%, ಅಂಕಗಳನ್ನು ಗಳಿಸಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನವನ್ನು ಪಡೆದಿರುತ್ತಾರೆ.

10 ವಿದ್ಯಾರ್ಥಿಗಳಲ್ಲಿ ಅತ್ಯುನ್ನತ ದರ್ಜೆಯಲ್ಲಿ 02 ವಿದ್ಯಾರ್ಥಿಗಳು, ಪ್ರಥಮ ದರ್ಜೆಯಲ್ಲಿ 02 ವಿದ್ಯಾರ್ಥಿಗಳು, ದ್ವಿತೀಯ ದರ್ಜೆಯಲ್ಲಿ 06, ವಿದ್ಯಾರ್ಥಿಗಳು ಉತ್ತೀರ್ಣರಾಗುವದರ ಜೊತೆಗೆ ಸಂಸ್ಥೆಗೆ 100% ಕ್ಕೆ 100% ಫಲಿತಾಂಶ ತಂದು ಕೊಟ್ಟಿದಾರೆ ಎಂದು ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ತುಪ್ಪದ ತಿಳಿಸಿದ್ದಾರೆ.



ಎಸ್.ಎಸ್. ಎಲ್.ಸಿ. ಪರೀಕ್ಷೆಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಹಾಗೂ ವಿದ್ಯಾರ್ಥಿಗಳ ಪಾಲಕರಿಗೆ ಆಡಳಿತ ಮಂಡಳಿಯವರು, ವಿಭಾಗ ಮುಖ್ಯಸ್ಥರು ಹಾಗೂ ಶಿಕ್ಷಕ ವೃಂದದವರು ಅಭಿನಂದಿಸಿದ್ದಾರೆ.

ಉದಯರಶ್ಮಿ
ಪ್ರತಿ ಮನೆ-ಮನದ ಸಂಗಾತಿ

# ರೆಡ್ಡಿ ಕುಲದ ಮಹಾಮಾತೆ ಹೇಮರೆಡ್ಡಿ ಮಲ್ಲಮ್ಮ

ಇಂದು ಮಹಾ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತೋತ್ಸವ ನಿಮಿತ್ತ ಈ ಲೇಖನ

ಉದಯರಶ್ಮಿ ದಿನಪತ್ರಿಕೆ

ವೀಣಾಂತರಂಗ



–ವೀಣಾ ಎಚ್. ಪಾಟೀಲ್, ಮುಂಡರಗಿ



ಆಕೆ ಹೆಣ್ಣು, ಅಬಲೆ ಎಂಬಂತೆ ಜನರಿಂದ ಬಿಂಬಿಸಲ್ಪಟ್ಟರೂ ಸಬಲೆಯಾಗಿದ್ದಳು. ಎಲ್ಲಿ ಬಾಗಬೇಕು, ಎಲ್ಲಿ ಎದ್ದು ನಿಲ್ಲಬೇಕು ಎಂಬುದು ಆಕೆಗೆ ಗೊತ್ತಿತ್ತು. ಗುರು ಹಿರಿಯ–ರಿಗೆ, ಅತ್ತೆ ಮಾವನಿಗೆ, ಕೈಹಿಡಿದ ಪತಿಯ ಜೊತೆ ಗೌರವಾದರದಿಂದ ನಡೆದುಕೊಳ್ಳುತ್ತಿದ್ದ ಆಕೆ ಮೈದುನ ದುಶ್ಚಟಗಳಿಗೆ ಬಲಿಯಾದಾಗ ಆತನನ್ನು ಸರಿದಾರಿಗೆ ತರಲು ಕಠೋರವಾಗಿ ನಡೆದುಕೊಂಡಳು. ನಾದಿನಿಯರನ್ನು, ನೆಗೆಣ್ಣಿಯರನ್ನು ಪ್ರೀತಿ ವಿಶ್ವಾಸದಿಂದ ಒಲಿಸಿಕೊಂಡಳು. ಆ ಪರಶಿವನನ್ನು ಸದಾ ಕಾಲ ಭಕ್ತಿ ಭಾವದಿಂದ ಪೂಜಿಸಿ ಆತನ ಪರಮ ಸಾನಿಧ್ಯ ಪಡೆದಳು.

ಗುರುವಿನ ಮಠದಾಗ ತಿರುಗಿ ಹೋದವರಾರು ಗುರುವಿನ ಮಗಳು ಗುರು ತಾಯಿ ಮಲ್ಲಮ್ಮ ಹೇಮರೆಡ್ಡೇರ ಸೊಸಿ..... ಎಂದು ನಮ್ಮ ಜನಪದರು ತಾಯಿ ಮಲ್ಲಮ್ಮನನ್ನು ಹಾಡಿ ಹೊಗಳಿದ್ದಾರೆ. ಸಂತ ಕವಿ ಶಿಶುನಾಳ ಶರೀಫರು ಮಲ್ಲಮ್ಮನ ಕುರಿತು ಗೀತೆಯನ್ನು ರಚಿಸಿದ್ದಾರೆ

ಹೇಮರೆಡ್ಡಿ ಮಲ್ಲಮ್ಮ ಇಂದಿನ ಆಂಧ್ರಪ್ರದೇಶದಲ್ಲಿರುವ ಶ್ರೀಶೈಲ ಪ್ರಾಂತದ ದಕ್ಷಿಣದಲ್ಲಿರುವ ರಾಮಪುರದ ನಾಗಿರೆಡ್ಡಿ ಮತ್ತು ಗೌರಮ್ಮ ಎಂಬ ದಂಪತಿಗಳಿಗೆ ಶ್ರೀಶೈಲದ ಮಲ್ಲಿಕಾರ್ಜುನ ಸ್ವಾಮಿಯ ಆಶೀರ್ವಾದದಿಂದ ಹುಟ್ಟಿದ ಮಗಳು.

ತಂದೆ ತಾಯಿಯರ ಒಳ್ಳೆಯ ಗುಣನಡತೆ,ಗುರುಭಕ್ತಿ, ಕಾಯಕ ನಿಷ್ಠೆ ಪ್ರಾಮಾಣಿಕತೆಗಳು ಮಗಳಲ್ಲೂ ಒಡ ಮೂಡಿದವು. ಬೇರಿನಂತೆ ಮರವಲ್ಲವೇ. ಒಳ್ಳೆಯ ಸಂಸ್ಕಾರವಂತೆಯಾಗಿ ಬೆಳೆದ ಮಲ್ಲಮ್ಮ ಪ್ರಾಪ್ತ ವಯಸ್ಕಳಾದಾಗ ಆಕೆಯನ್ನು ಹತ್ತಿರದಲ್ಲಿಯೇ ಇದ್ದ ಕುಮಾರಗಿರಿ ಬಳಿಯ ವೆಂಕಟ–ರೆಡ್ಡಿ ಅವರ ಮಗ ಭರಮಗೌಡನಿಗೆ ಕೊಟ್ಟು ಮದುವೆ ಮಾಡಲಾಯಿತು. ಭರಮಗೌಡ ಕೊಂಚ ಮಂದ ಬುದ್ಧಿಯವನು. ಬಹಳ ಮುಗ್ಧ ಮತ್ತು ಹೇಳಿದ್ದನ್ನು ಮಾತ್ರ ಅನುಸ–ರಿಸುವ ಸಾಧು ಬುದ್ಧಿಯವನು. ಆದರೆ ಮಲ್ಲಮ್ಮ ಎದೆಗುಂದಲಿಲ್ಲ... ಗಂಡ ಹೇಗೇ ಇದ್ದರೂ ಪತಿಯೇ ಪರದೈವ ಎಂಬಂತೆ ಆತನ ಸೇವೆಯನ್ನು ಮಾಡುತ್ತಿದ್ದಳು.

ಹೊಸದಾಗಿ ಬಂದಾಗ ಮನೆಯಲ್ಲಿ ಅತ್ತೆ, ಮಾವ, ಭಾವ, ಓರಗಿತ್ತಿಯರು, ನಾದಿನಿಯರು ಮತ್ತು ಅವರ ಗಂಡಂದಿರು ಹೀಗೆ ತುಂಬು ಸಂಸಾರ. ಮಲ್ಲಮ್ಮನ ಸಾತ್ವಿಕ ಮತ್ತು ಎಲ್ಲದಕ್ಕೂ ಹೂಗುಡುವ ಗುಣವನ್ನು ಕಂಡ ಓರಗಿತ್ತಿಯರು ಮತ್ತು ನಾದಿನಿಯರು ತಮ್ಮೆಲ್ಲಾ ಕೆಲಸಗಳನ್ನು ಆಕೆಯ ಮೇಲೆ ಹೇರಿ ಆರಾಮವಾಗಿ ಕಾಲ ಕಳೆಯುತ್ತಿದ್ದರು. ಮಲ್ಲಮ್ಮ ಕೊಂಚವೂ ಬೇಸರಿಸದೇ ಎಲ್ಲಾ ಕೆಲಸಗಳನ್ನು ಮಾಡಿ ಮುಗಿಸುತ್ತಿದ್ದಳು. ಅಷ್ಟೆಲ್ಲ ಕೆಲಸ ಮಾಡಿ ಮುಗಿಸುವ ಮಲ್ಲಮ್ಮನಿಗೆ ಒಳ್ಳೆಯ ಆಹಾರವನ್ನು ಕೂಡ ಕೊಡುತ್ತಿರಲಿಲ್ಲ.

ಎಲ್ಲರೂ ಊಟ ಮಾಡಿದ ಮೇಲೆ ಉಳಿದ ಹೊತ್ತಿದ ಅಂಬಲಿ ಆಕೆಯ ಆಹಾರವಾಗಿರುತ್ತಿತ್ತು. ಇದು ಕೂಡ ಭಗವಂತನ ಕೃಪೆ ಎಂದು ಭಾವಿಸುವ ಮಲ್ಲಮ್ಮ ತನ್ನ ಪಾಲಿಗೆ ಬಂದ ಅಂಬಲಿಯನ್ನೇ ಲಿಂಗ ಪೂಜೆ ಮಾಡಿ ದೇವರಿಗೆ ನೈವೇದ್ಯ ಮಾಡಿ ಸೇವಿಸುತ್ತಿದ್ದಳು.

ಮನೆಯಲ್ಲಿ ಚೀಲಗಟ್ಟಲೆ ಜೋಳ, ಜೋಳದ ನುಚ್ಚುಗಳನ್ನು, ಕುಟ್ಟುವ, ಬೀಸುವ ಕಲ್ಲಿನಲ್ಲಿ ಬೀಸಲು ಹಚ್ಚುತ್ತಿದ್ದರು ಅತ್ತೆ. ಮಲ್ಲಮ್ಮನಿಗೆ ಆಕೆಯ ನೆಗೆಣ್ಣೀರು ತಮ್ಮ ಕೆಲಸಗಳನ್ನು ಕೂಡ ವಹಿಸಿ ಹೊರಟುಬಿಡುತ್ತಿದ್ದರು. ಕೊಂಚವೂ ಬೇಸರಿಸದೇ ಮಲ್ಲಮ್ಮ ತನ್ನ ಪಾಲಿನ ಬಂದ ಎಲ್ಲ ಕೆಲಸಗಳನ್ನು ಮಾಡಿ ಮುಗಿಸುತ್ತಿದ್ದಳು.

ಆಕೆಯನ್ನು ಪರೀಕ್ಷಿಸಲೆಂದೇ ಮನೆಯಲ್ಲಿ ಸಾಕಷ್ಟು ಆಳುಗಳಿದ್ದೂ ಕೂಡ ಆಕೆಯನ್ನು ಹಸುಗಳನ್ನು ಮೇಯಿಸಿಕೊಂಡು ಬರಲು ಅಡವಿಗೆ ಕಳುಹಿಸುತ್ತಿದ್ದರು. ಅಲ್ಲಿಯೂ ಕೂಡ ಮಲ್ಲಮ್ಮ ಹಸುಗಳನ್ನು ಹೊಡೆದುಕೊಂಡು ಅಡವಿಗೆ ಹೋಗಿ ಹಸುಗಳನ್ನು ಮೇಯಲು ಬಿಟ್ಟು, ಅಲ್ಲಿ ಅಡವಿಯಲ್ಲಿ ಸಿಕ್ಕ ಶಿವಲಿಂಗಕ್ಕೆ ಪೂಜೆ ಮಾಡಿ ಧ್ಯಾನಕ್ಕೆ ಕೂರುತ್ತಿದ್ದಳು. ಆಕೆಯ ಧ್ಯಾನ ಅದೆಷ್ಟು ಸಶಕ್ತವಾಗಿರುತ್ತಿತ್ತೆಂದರೆ ಹಸುಗಳು ಕೂಡ ಆಕೆಗೆ ಧ್ಯಾನಭಂಗ ಮಾಡದೆ ಅಲ್ಲಿಯೇ ಮೇಯುತ್ತಿದ್ದವು. ಇಲ್ಲವೇ ಮರದ ನೆರಳಿನಲ್ಲಿ ಮಲಗಿ ವಿಶ್ರಾಂತಿ ಪಡೆಯುತ್ತಿದ್ದವು.

ಒಂದೊಮ್ಮೆ ಮಲ್ಲಮ್ಮ ಮನೆಗೆ ಬಂದ ಭಿಕ್ಷುಕನಿಗೆ ನೀಡಲು ತನ್ನ ಬೊಗಸೆಯಲ್ಲಿ ಅತ್ತೆ ಹಾಕಿದ ಒಲೆಯೊಳಗೆ ಉರಿಯುತ್ತಿದ್ದ ನಿಗಿನಿಗಿ ಕೆಂಡಗಳನ್ನು ಮಲ್ಲಯ್ಯನ ಧ್ಯಾನ ಮಾಡಿ ಭಿಕ್ಷುಕನ ಜೋಳಿಗೆಗೆ ಹಾಕಿದಾಗ ಅದು ಧಾನ್ಯವಾಗಿ ಪರಿವರ್ತನೆಯಾಯಿತು. ಇದನ್ನು ಕಂಡು ಜನರು ಮಲ್ಲಮ್ಮನಿಗೆ ಬೆಂಕಿ ದಾನದ ಮಲ್ಲಮ್ಮ ಎಂದು ಕರೆದರು.

ಮನೆಯವರೆಲ್ಲರ ಅತಿಯಾದ ಮೋಹದಿಂದ ಕೆಟ್ಟು ಹೋಗಿದ್ದ ಮೈದುನ ವೇಮನ ಮಹಾಕವಿಯಾಗಿ ರೆಡ್ಡಿ ಕುಲದ ಉದ್ಧಾರಕನಾಗಿ ಬದಲಾಗಿದ್ದು ಮಲ್ಲಮ್ಮನಿಂದಲೇ. ಹಲವಾರು ದುಶ್ಚಟಗಳನ್ನು ಕಲಿತ ಮೈದುನ ವೇಶ್ಯೆಯ ಸಹವಾಸವನ್ನು ಕೂಡ ಮಾಡಿದ್ದ. ಒಂದೊಮ್ಮೆ ದೇವಸ್ಥಾನದಲ್ಲಿ ಮಲ್ಲಮ್ಮನ ಮೂಗುತಿಯನ್ನು ಕಂಡು ಅದಕ್ಕೆ ಆಸೆ ಪಟ್ಟ ಆ ವೇಶ್ಯಾ ಸ್ತ್ರಿಯ ಅಪೇಕ್ಷೆಯಂತೆ ವೇಮನ ಮಲ್ಲಮ್ಮನ ಬಳಿ ಆ ಮೂಗುತಿಯನ್ನು ಕೇಳಿದ. ಮಲ್ಲಮ್ಮ ಇದು ನನ್ನ ತವರು ಮನೆಯಿಂದ ಬಂದ ಉಡುಗೊರೆ ಆದರೂ ನಿನಗೆ ಒಂದು ಷರತ್ತಿನ ಮೇಲೆ ಇದನ್ನು ಕೊಡುತ್ತೇನೆ ಎಂದು ಹೇಳಿ, ಆ ಮೂಗುತಿಯನ್ನು ನೆಲದ ಮೇಲೆ ಇಟ್ಟು ಸಂಪೂರ್ಣ ನಿರ್ವಾಣ ಸ್ಥಿತಿಯಲ್ಲಿ ಹಿಂದೆ ಬಾಗಿ ಆ ವೇಶ್ಯ ಸ್ತ್ರೀಯು ಮೂಗುತಿಯನ್ನು ತೆಗೆದುಕೊಳ್ಳಬೇಕು ಮತ್ತು ಆ ದೃಶ್ಯವನ್ನೇ ವೇಮನ ತದೇಕಚಿತನಾಗಿ ನೋಡಲೇಬೇಕು ಎಂಬುದು ಆಕೆಯ ಷರತ್ತು. ಇದಕ್ಕೊಪ್ಪಿದ ವೇಮನ ಮೂಗುತಿಯನ್ನು ಅತ್ತಿಗೆಯಿಂದ ಪಡೆದು ವೇಶ್ಯಾ ಬಳಿ ಸಾರಿ ಅತ್ತಿಗೆಯ ಷರತ್ತನ್ನು ಹೇಳಿದ. ಅದನ್ನು ಕೇಳಿದ ಆಕೆ ತಕ್ಷಣವೇ ಶರತ್ತಿಗೆ ಒಪ್ಪಿ ನಿರ್ವಾಣ ಸ್ಥಿತಿಯಲ್ಲಿ ಮೂಗುತಿಯನ್ನು ಪಡೆದಳು. ಆಕೆಯನ್ನು ನಿರ್ವಾಣ ಸ್ಥಿತಿಯಲ್ಲಿ ನೋಡಿದ ವೇಮನ ಭಯಂಕರ ಕ್ಷೋಭೆ ವಿಕಾರಗಳಿಗೊಳಗಾಗಿ ಮಾನವನ ದೇಹ ಎಂದರೆ ಇಷ್ಟೇಯೇ ಎಂದು ಜಿಗುಪ್ಸೆಗೊಂಡು ಅಲ್ಲಿಂದ ಓಡಿ ಹೋದನು. ಜ್ಞಾನೋದಯವಾದ ನಂತರ ವೇಮನ ಅತ್ತಿಗೆಯ ಪಾದಕ್ಕೆ ಬಿದ್ದು ಕ್ಷಮೆ ಕೇಳಿ ಮುಂದೆ ಮನೆ ಬಿಟ್ಟು ಹೋಗಿ ಸಮಾಜವನ್ನು ಸುಧಾ–ರಿಸುವ ನಿಟ್ಟಿನಲ್ಲಿ ಮಹಾಕವಿಯಾದ, ಸಮಾಜೋದ್ಧಾರಕನಾದ.

ಹೀಗೆ ಎಲ್ಲ ರೀತಿಯ ಕಠಿಣ ಪರೀಕ್ಷೆಗಳನ್ನು ಕಂಡ ಹೇಮರೆಡ್ಡಿ ಮಲ್ಲಮ್ಮನ ಕುರಿತು ಸಂಬಂಧಿಗಳು




ಹೊರಿಸಿದ ಸಲ್ಲದ ಆರೋಪಗಳನ್ನು ಮಿಥ್ಯವೆಂದು ಸಾರಲು ಆ ಭಗವಾನ್ ಶಂಕರನೇ ಪತ್ನಿ ಸಮೇತನಾಗಿ ಬರಬೇಕಾಯಿತು. ಆಗ ಕುಟುಂಬ ಆದಿಯಾಗಿ ಹೇಮರೆಡ್ಡಿ ಮಲ್ಲಮ್ಮನನ್ನು ಊರವರೆಲ್ಲ ತಪ್ಪಿತಸ್ಥಳಲ್ಲವೆಂದು ಒಪ್ಪಿಕೊಂಡರು. ಮಲ್ಲಮ್ಮನ ಭಕ್ತಿಗೆ ಮೆಚ್ಚಿದ ಪರಶಿವನು ಆಕೆಗೆ ವರವನ್ನು ಕೇಳಲು ಹೇಳಿದಾಗ ಸಮಸ್ತ ರೆಡ್ಡಿ ಕುಲ ಎಂದೂ ಆರ್ಥಿಕ ತೊಂದರೆಯಿಂದ ಬಳಲಬಾರದು ಎಂಬ ದೃಷ್ಟಿಯಿಂದ ಮಲ್ಲಮ್ಮ ರೆಡ್ಡಿ ಕುಲದ ಜನರಿಗೆ ಬಂಗಾರದ ಕಡ್ಡಿ ಹೊಂದಿರುವಷ್ಟಾದರೂ ಶ್ರೀಮಂತಿಕೆ ಇರಲೇಬೇಕು ಎಂದು ಬೇಡಿಕೊಂಡಳು. ಆಕೆಯ ಬೇಡಿಕೆಯ ಫಲವಾಗಿ ಇಂದಿಗೂ ಸಮಸ್ತ ರೆಡ್ಡಿ ಕುಲವನ್ನು ರೆಡ್ಡಿ ಬಂಗಾರದ ಕಡ್ಡಿ ಎಂದೇ ಕರೆಯುತ್ತಾರೆ.

ಹೇಮರೆಡ್ಡಿ ಮಲ್ಲಮ್ಮ ಶತಶತಮಾನಗಳಿಂದ ರೆಡ್ಡಿ ಕುಲದೇವಿಯಾಗಿ ಎಲ್ಲ–ರಿಂದಲೂ ಪೂಜಿಸಲ್ಪಡುತ್ತಾ ಅಜರಾಮರಳಾಗಿದ್ದಾಳೆ. ಪ್ರತಿ ವರ್ಷ ಮೇ ಹತ್ತರಂದು ಹೇಮರೆಡ್ಡಿ ಮಲ್ಲಮ್ಮನ ಜಯಂತಿ ಜರುಗುತ್ತದೆ. ಮಲ್ಲಮ್ಮನು ಓಡಾಡಿದ ಶ್ರೀಶೈಲ ಪ್ರಾಂತ್ಯದಲ್ಲಿ ಅತಿ ದೊಡ್ಡ ಹೇಮರೆಡ್ಡಿ ಮಲ್ಲಮ್ಮನ ದೇವಸ್ಥಾನವನ್ನು, ಆಕೆ ವಾಸಿಸಿದ್ದಳೆನ್ನಲ್ಲಾದ ಸ್ಥಳದ ಬಳಿಯಲ್ಲಿಯೇ ರೆಡ್ಡಿ ಕುಲಬಾಂಧವರು ನಿರ್ಮಿಸಿದ್ದಾರೆ, ಮಲ್ಲಮ್ಮ ಬಳಸುತ್ತಿದ್ದ ವನಕೆ ಹೊರಳು ಕಲ್ಲು ಬೀಸುವ ಕಲ್ಲು ಪೂಜಿಸುತ್ತಿದ್ದ ಶಿವಲಿಂಗದ ವಿಗ್ರಹಗಳು ಅಲ್ಲಿ ಇದ್ದು ಹೇಮರೆಡ್ಡಿ ಮಲ್ಲಮ್ಮನಿಗೆ ಉಡಿ ತುಂಬುವ ಮೂಲಕ ಭಕ್ತರು ತಮ್ಮ ಇಷ್ಟಾರ್ಥ–ಗಳನ್ನು ಪೂರೈಸಿಕೊಳ್ಳುತ್ತಾರೆ ಎಂಬ ಪ್ರತೀತಿ ಇದೆ. ಪ್ರತಿ ವರ್ಷ ಕಾರ್ತಿಕ ಮಾಸದಲ್ಲಿ ನಡೆಯುವ ಲಕ್ಷ ದೀಪೋತ್ಸವ ನೋಡಲು ಎರಡು ಕಣ್ಣುಗಳು ಸಾಲದು. ಬನ್ನಿ ನಾವು ಕೂಡ ಸ್ತ್ರೀ ಕುಲದ ಹೆಮ್ಮೆಯ ಕಳಶ ಮಲ್ಲಮ್ಮ ತಾಯಿಯನ್ನು ಪೂಜಿಸಿ ಆಕೆಯ ಕೃಪಾಶೀರ್ವಾದಕ್ಕೆ ಪಾತ್ರರಾಗೋಣ.

# ಬಸವಣ್ಣನವರ ವಚನಗಳಲ್ಲಿ ಕಾವ್ಯ ಸೌಂದರ್ಯ

ಉದಯರಶ್ಮಿ ದಿನಪತ್ರಿಕೆ

– ಡಾ.ಪೂರ್ಣಿಮಾ ಧಾಮಣ್ಣವರ
ಕನ್ನಡ ಉಪನ್ಯಾಸಕರು, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ವಿಜಯಪುರ



ಇಂದು ವಿಶ್ವಗುರು ಬಸವಣ್ಣನವರ ಜಯಂತಿ ಪ್ರಯುಕ್ತ ವಿಶೇಷ ಲೇಖನ

ಕಾವ್ಯ ಸೌಂದರ್ಯ ಎನ್ನುವುದು ಕೇವಲ ಕವಿತೆಗಳಲ್ಲಿಯೇ ಇರುತ್ತದೆಯೆಂದಲ್ಲ, ಪ್ರತಿಭಾನ್ವಿತರು ಬರೆದ ವಚನಗಳಲ್ಲಿ ಕಾವ್ಯದ ಅನನ್ಯತೆ ಕಾಣಿಸಿಕೊಳ್ಳುತ್ತದೆ. ಇದಕ್ಕೆ ವಚನ–ಕೀರ್ತನೆ–ತತ್ವಪದ ಇವು ಯಾವುದು ಹೊರತಾಗಿಲ್ಲ. ಬಸವಣ್ಣನವರ ವಚನಗಳಂತೂ ಆಧುನಿಕ ಸಂದರ್ಭದ ಭಾವಗೀತೆಗಳಂತೆ ಸುಂದರವಾಗಿವೆ. ರಚನೆ ಸುಂಧರವಾಗಿ ಅನನ್ಯವಾಗಿ ಕಾಣಲು ಹೇಳುವ ವಿಷಯದಷ್ಟೇ ಅಭಿವ್ಯಕ್ತಿ ಕ್ರಿಯೆಯೂ ಮುಖ್ಯವಾಗಿರಬೇಕಾಗುತ್ತದೆ. ಕಾವ್ಯವು ಅಭಿವ್ಯಕ್ತಿ ಭಾಷೆಯನ್ನ ವಹಿಸಿರುತ್ತದೆ. ಹೀಗಾಗಿ ಕವಿತೆಯಾಗಲಿ, ವಚನವಾಗಲಿ ಸುಂದರವಾಗಿ ಕಾಣಬೇಕಾದರೆ ಅದರಲ್ಲಿ ಬಳಸುವ ಭಾಷಾ ಚಮತ್ಕಾರ ಪಡೆನುಡಿಗಳು ಗಾದೆ ಮಾತುಗಳು, ಅಲಂಕಾರಗಳು ತುಂಬಾ ಮುಖ್ಯವಾಗಿರುತ್ತವೆ. ಆದ–ರೆ ನಿಜವಾದ ಕಾವ್ಯ ಓದುಗನನ್ನು ಕಟ್ಟಿ ಹಾಕುತ್ತದೆ ಹಾಗೂ ಒಳಗೆ ಇಳಿಯುತ್ತದೆ, ನಿನದಿಸುತ್ತದೆ, ಗುನುಗುಡುತ್ತದೆ. ಮನದಾಳದಲ್ಲಿ ಹಸಿರಾಗುತ್ತದೆ. ಇಂತಹ ತೀವ್ರವಾದ, ಆಶ್ಚರ್ಯಕರವಾದ ಅನನ್ಯವಾದ ಪರಿಣಾಮ ನಿಜವಾದ ಕಾವ್ಯದಿಂದ ಮಾತ್ರ ಸಾಧ್ಯವಾಗುತ್ತದೆ. ಬಸವಣ್ಣನವರ ವಚನಗಳು ಅಂತಹ ಸುಂದರ ರಚನೆಗಳಾಗಿವೆ. ಅವರ ಅನೇಕ ವಚನಗಳು ಕಾವ್ಯಸೌಂದರ್ಯದ ಅನುಭವವನ್ನು ನಾವು ಕಾಣುತ್ತೇವೆ.

ಮೊದಲಿಗೆ ಕಾವ್ಯ ಸೌಂದರ್ಯ ಎಂದರೇನು? ಎಂಬ ಪ್ರಶ್ನೆ ಏಳುತ್ತದೆ. ಭಾರತೀಯ ಅಲಂಕಾರಿಕನಾದ ಭಾಮಹ ಸೌಂದರ್ಯಮಾಲಂಕಾರ: ಎಂದು ಹೇಳುತ್ತಾನೆ. ಇಲ್ಲಿ ಸೌಂದರ್ಯವೆಂದರೆ ಕವಿಯ ಅನುಭವದ ಸೌಂದರ್ಯವೆಂದು ಅರ್ಥವಿಸಬಹುದು. ಈ ಅನುಭವದ ಸೌಂದರ್ಯ ಅನಿವಾರ್ಯವಾಗಿ ಮಾತಿನ ಸೌಂದರ್ಯವನ್ನೇ ನಮ್ಮವರು 'ಉಕ್ತಿವೈಚಿತ್ರ ▯▯ ಅಥವಾ ಅಲಂಕಾರ' ಎಂದು ಕರೆದಿದ್ದಾರೆ. ಲೋಕದ ಮಾತಿಗಿಂತ ಭಿನ್ನವಾದ ಮನೋಹರವಾದ ಉಕ್ತಿಯಿಂದ ಕೂಡಿರುವುದನ್ನೇ ಕಾವ್ಯ ಎಂದರು. ಇಂತ ಮನೋಹರವಾದ ಅಭಿವ್ಯಕ್ತಿಗಳಿಂದ ತುಂಬಿ ತುಳುಕುತ್ತಿರುವುದರಿಂದಲ್ಲೇ ಬಸವಣ್ಣನವರ ವಚನಗಳು ಶ್ರೇಷ್ಠ ಕಾವ್ಯದ ಮಾದರಿಯನಿಸಿವೆ.

12ನೆಯ ಶತಮಾನದಲ್ಲಿ ಮೂಡಿಬಂದ ಒಂದು ಅಪರೂಪ ಸಾಹಿತ್ಯ ಪ್ರಕಾರ ವಚನಗಳು. ಅಂದಿನ ವಚನಕಾರರು ಈ ಪ್ರಕಾರವನ್ನು ಪ್ರಮುಖವಾಗಿ ಧರ್ಮ ಪ್ರಸಾರದ ಸಾಧನವನ್ನಾಗಿ ಬಳಸಿಕೊಂಡರು. ಸಂಸ್ಕೃತದ ಭೂಯಿಷ್ಟದ ಬಹುಮಟ್ಟಿಗೆ ಪಂಡಿತರಿಗೆ ಮೀಸಲಾಗಿದ್ದ ಚಂಪು ಸಂಪ್ರದಾಯದ ಹಿಡಿತದಿಂದ ಸಾಹಿತ್ಯವನ್ನು ಬಿಡಿಸಿ ಸಾಮಾನ್ಯ ಮನುಷ್ಯನ ಮನೆಬಾಗಿಲಿಗೆ ಕಾವ್ಯಗಂಗೆಯನ್ನು ಹರಿಸಿದವರು ವಚನಕಾರರು. ಅದರಲ್ಲಿಯೂ ವಚನ ಸಾಹಿತ್ಯದ ವಿಶೇಷ ಲಕ್ಷಣಗಳಲ್ಲಿ ಗೋಚರವಾಗುವುದು ಬಸವಣ್ಣನವರ ವಚನಗಳಲ್ಲಿಯೇ.

ದೃಷ್ಟಾಂತಗಳು ಉಪಮೆ–ರೂಪಕಗಳು ಶಬ್ಧಚಿತ್ರಗಳು ಇವುಗಳು ಬಸವಣ್ಣನವ ವಚನಗಳಲ್ಲಿ ತುಂಬಿ ತುಳುಕುತ್ತಿದೆ. ಧರ್ಮ ಪ್ರಚಾರದ ಉತ್ಸಾಹ ಜನ ಸುಧಾರಿಸಬೇಕೆಂಬ ಹಂಬಲ ಜೀವ ತನ್ನ ಕಾಳಿಕೆಯನ್ನು ಕಳೆದುಕೊಂಡು ಶುದ್ಧ ಅಪರಂ–ಜಿಯಾಗಬೇಕೆಂಬ ಕಾತರ ಇವೆ. ಇವರ ಸಾಹಿತ್ಯ ಪ್ರೇರಣೆ ಕವಿಯಾಗಿ ಕೀರ್ತಿ ಗೌರವಗಳನ್ನು ಗಳಿಸಿಕೊಳ್ಳಬೇಕೆಂಬ ಬಯಕೆ ಅವರಿಗಿರಲಿಲ್ಲ. ಅಂದಂದಿನ ಅವರ ಅನುಭವ ತಮ್ಮ ತೀವ್ರತೆ ಒತ್ತಡಗಳಿಂದಾಗಿ ವಚನಗಳ ರೂಪ ತಾಳಿತು. ಅವರದು ಕವಿ ಹೃದಯವಾದ್ದರಿಂದ ಅವರಾಡಿದ ಮಾತು ಅವರಿಗರಿವಿಲ್ಲದೆಯೇ ಕಾವ್ಯವಾಯಿತು. ಅವರ ಒಂದೊಂದು ವಚನವೂ ಭಾವಗೀತೆಯು ಸತ್ವ, ಸೌಂದರ್ಯಗಳನ್ನು ಒಡಗೂಡಿಸಿಕೊಂಡು ಬಿಡಿ ಬಿಡಿ ಮುಕ್ತಕಗಳಂತಿವೆ.

ಬಸವಣ್ಣನವರು ಸಾಮಾನ್ಯನ ಅನುಭವದ ಪರಿಮಿತಿಯಲ್ಲಿ ಬರಬಹುದಾದ ತಮ್ಮ ಸುತ್ತಮುತ್ತ ಕಂಡ ಬದುಕಿನ ಎಲ್ಲ ದೃಶ್ಯಗಳನ್ನೂ ಅನುಭವಗಳನ್ನೂ ತಮ್ಮ ಅಭಿವ್ಯಕ್ತಿಗೆ ಸಾಧನವನ್ನಾಗಿ ಬಳಸಿಕೊಂಡರು. ಪ್ರಾಣಿ ಪ್ರಪಂಚ, ಸಸ್ಯ ಪ್ರಪಂಚ ಮಾನವ ವ್ಯವಹಾರ ಯಾವುದೂ ಅವರ ಕಣ್ಣಿನಿಂದ ತಪ್ಪಿಸಿಕೊಳ್ಳಲಿಲ್ಲ. ಅವರ ಸೂಕ್ಷ್ಮಗ್ರಹಣಶಕ್ತಿ, ವಿಸ್ತಾರವಾಗಿ ಹರಡಿ ಬಿದ್ದಿದ್ದ ಜೀವನವನ್ನು ಕಾವ್ಯದ ತೆಕ್ಕೆಗೊಗ್ಗಿಸಿಕೊಳ್ಳುವ ಅವರ ಪ್ರತಿಭೆ ವಿಸ್ಮಯ ಹುಟ್ಟಿಸುತ್ತದೆ. ಅವರ ವಚನಗಳಲ್ಲಿ ದೃಷ್ಟಾಂತಾಲಂಕಾರಗಳು




ವಿಪುಲವಾಗಿ ಕಂಡು ಬರುತ್ತವೆ. ಉದಾ–

'ಚಕೋರಂಗೆ ಚಂದ್ರಮನ ಬೆಳಗಿನ ಚಿಂತೆ

ಅಂಬುಜಕೆ ಭಾನುವಿನ ಉದಯದ ಚಿಂತೆ

ಭ್ರಮರಂಗೆ ಪರಿಮಳದ ಬಂಡುಂಬ ಚಿಂತೆ

ಎನಗೆ ನಮ್ಮ ಕೂಡಲ ಸಂಗಮ ದೇವರ ನೆನೆವುದೆ ಚಿಂತೆ'

ಇಂಥಹ ಹಲವಾರು ವಚನಗಳಲ್ಲಿ ಲೋಕಪ್ರಿಯ ದೃಷ್ಟಾಂತಗಳನ್ನು ಬಳಸಿ ಅತ್ಯಂತ ಸರಳವಾಗಿ ಹಾಗೂ ಪ್ರಾಮಾಣಿಕ ಭಗವಂತನ ಬಗೆಗಿನ ತಮ್ಮ ಹಂಬಲವನ್ನು ತೋಡಿಕೊಂಡಿದ್ದಾರೆ. ಅದೇ ರೀತಿ ಇನ್ನೊಂದು ವಚನವನ್ನು ಗಮನಿಸಬಹುದು.

'ಮಡಕೆಯ ಮಾಡುವರೆ ಮಣ್ಣೇ ಮೊದಲು

ತೊಡುಗೆಯ ಮಾಡುವರೆ ಹೊನ್ನೆ ಮೊದಲು

ಶಿವಪಥವನರಿವರೆ ಗುರುಪಥ–'ವೇ ಮೊದಲು

ಕೂಡಲ ಸಂಗಮದೇವರನ–ರಿವರೆ

ಶರಣ–ರ ಸಂಗವೇ ಮೊದಲು'

ಇಲ್ಲಿ ಹಲವಾರು ದೃಷ್ಟಾಂತ ಮಾಲಿಕೆಯನ್ನು ಬಳಸಿ, ಭಗವಂತನನ್ನು ಅರಿಯಬೇಕಾದರೆ ಶರಣರ ಸಹವಾಸದಿಂದ ಮಾತ್ರ ಸಾಧ್ಯವೆಂಬುದನ್ನು ಬಸವಣ್ಣನವರು ತರ್ಕಪೂರ್ಣವಾಗಿ ಪ್ರತಿಪಾಧಿಸುತ್ತಾರೆ. ಮತ್ತೊಂದೆಡೆ.

ಬೇವಿನ ಬೀಜವ ಬಿತ್ತಿ ಬೆಲ್ಲದ ಕಟ್ಟೆಯ ಕಟ್ಟಿ

ಆಕಳ ಹಾಲನೆರೆದು ಜೇನ ತುಪ್ಪವ ಹೊಯ್ದಡೆ,

ಸಿಹಿಯಾಗಬಲ್ಲುದೆ, ಕಹಿಯಬಹುದಲ್ಲದೆ?

ಎಂಬ ವಚನದಲ್ಲಿ ಹುಟ್ಟುಗುಣ ಏನು ಮಾಡಿದರೂ ಹೋಗದು ಎಂಬುವುದನ್ನು ಹೇಳಲು ಬಸವಣ್ಣನವರು ಬಳಸಿರುವ ಈ ದೃಷ್ಟಾಂತದಲ್ಲಿ. ಬೀಜ ಅದು ಫಲ ಕೊಡುವ ತನಕ ಒಂದು ವೃಕ್ಷ ಬೆಳೆಯುವ ಕ್ರಿಯೆಯನ್ನು ಎಷ್ಟು ಸುಂದರವಾಗಿ ಪದಗಳಲ್ಲಿಯೇ ಕಟ್ಟಿಕೊಡುತ್ತಾರೆ. ಇಂಥ ದೃಷ್ಟಾಂತಗಳು ನಿದರ್ಶನಗಳು ಬಸವಣ್ಣನವರಲ್ಲಿ ವಿಪುಲ. ಅಳಿಮನದ ಭಕ್ತಿಯನ್ನು ವಿವ–ರಿಸುತ್ತಾ 'ಕುಂಬಳದ ಕಾಯಿಗೆ ಕಬ್ಬುನದ ಕಟ್ಟಿಕೊಟ್ಟರೆ ಕೊಳೆವುದಲ್ಲದೆ ಬಲುಹಾಗಬಲ್ಲುದೆ' 'ಸಗಣಿಯ ಬೆನಕಂಗೆ ಸಂಪಗೆಯರಳಲ್ಲಿ ಪೂಜಿಸಿದರೆ ರಂಜನೆಯಲ್ಲದೆ ಅದರ ಗಂಜಳ ಬಿಡದಣ್ಣಾ' 'ಎನಿಸುಕಾಲ ಕಲ್ಲುನೀರೊಳಗಿರ್ದರೇನು? ನೆನದು ಮೃದುವಾಗಬಲ್ಲುದೆ? ಎನ್ನುತ್ತಾರೆ. ಇಂಥಲ್ಲೆಲ್ಲ ಅವರ ಲೋಕಾನುಭವ ಸರ್ವವಿಧಿತ. ಇನ್ನೊಂದೆಡೆ.

ಮರಕ್ಕೆ ಬಾಯಿ ಬೇರೆಂದು ತಳಕ್ಕೆ ನೀರೆರೆದರೆ

ಮೇಲೆ ಪಲ್ಲವಿಸಿತ್ತು ನೋಡಾ'

ಎಂಬಲ್ಲಿ ಲಿಂಗದ ಮುಖ ಜಂಗಮ, ಭಗವಂತ ಸೇವೆ ಸ್ವೀಕ–ರಿಸುವುದು ಜಂಗಮದ ಮೂಲಕ

ಎನ್ನುವುದನ್ನು ಪ್ರತಿಪಾದಿಸಲು, ಬಸವಣ್ಣನವರು ಬಳಸಿರುವ ಈ ದೃಷ್ಟಾಂತ ಅದ್ಭುತವಾಗಿದೆ, ಸೃಷ್ಟಿಯನ್ನು ಕಂಡಾಗ ಬಸವಣ್ಣವನವರಿಗಾದ ವಿಸ್ಮಯಭಾವ ಸೊಗಸಾಗಿ ಚಿತ್ರತವಾಗಿದೆ.

ದೃಷ್ಟಾಂತಗಳಂತೆಯೆ ಬಸವಣ್ಣನವರು ಸುತ್ತಲು ಜನಜೀವನದಿಂದೆತ್ತಿಕೊಂಡ ಉಪಮೆಗಳನ್ನು ವಿಫುಲವಾಗಿ ಬಳಸಿದ್ದಾರೆ. ಬಸವಣ್ಣನವರು ಸುತ್ತಲು ಜನಜೀವನ ಏನಿತ್ತೋ ಅದನ್ನೇ ತಮ್ಮ ವಚನದ ವಸ್ತುವನ್ನಾಗಿ ತಗೆದುಕೊಂಡು ಉಪಮೆಗಳನ್ನು ವಿಪುಲವಾಗಿ ಬಳಸಿದ್ದಾರೆ. ಬಸವಣ್ಣನವರ ವಚನಗಳಲ್ಲಿ ಉಪಮೆ ಬರಿ ಹೋಲಿಕೆಯಾಗಿಲ್ಲ. ತಟ್ಟನೆ ಕಣ್ಣೆದುರು ಒಂದು ಚಿತ್ರವನ್ನು ನಿಲ್ಲಿಸುವ ಆಡಿದ ಮಾತನ್ನು ಮುಟ್ಟಿಸುವ, ಆಡಿದ ಮಾತನ್ನು ಮನಕ್ಕೆ ಮುಟ್ಟಿಸುವ, ಅರ್ಥವನ್ನು ಔಚಿತ್ಯ ಪೂರ್ಣವಾಗಿ ಬಿಂಬಿಸುವ ಸಾರ್ಥಕ ಕಾರ್ಯವನ್ನು ಅದು ಮಾಡಿದೆ. ಬಸವಣ್ಣನವರು ತಮ್ಮ ವಚನದಲ್ಲಿ ಕೂಡಲ ಸಂಗಮದೇವನ ಸ್ನೇಹದ ಪರಿಯನ್ನು ವಿವರಿಸುತ್ತಾರೆ.

ಉದಕದೊಳಗೆ ಬಚ್ಚಿಟ್ಟ ಬಯ್ಕೆಯ ಕಿಚ್ಚಿನಂತಿದ್ದಿತ್ತು

ಸಸಿಯೊಳಗಣ ರಸದ ರುಚಿಯಂತಿದ್ದಿತ್ತು

ನನೆಯೊಳಗಣ ಪರಿಮಳದಂತಿದ್ದಿತ್ತು

ಕೂಡಲ ಸಂಗಮದೇವಾ, ಕನ್ನೆಯ

ಎನ್ನುವಲ್ಲಿ, ಮೊದಲ ಸಾಲು ಒಂದರೊಳಗೊಂದು ಅಡಗಿರುವ ಆದರೆ ಒಂದಕ್ಕೊಂದು ವಿರುದ್ಧವಾದ ಎರಡು ವಸ್ತುಗಳನ್ನು ಕುರಿತು ಹೇಳಿದರೆ, ಎರಡನೆಯ ಸಾಲು ಚಂದ್ರನಲ್ಲಿ ಅಡಗಿರುವ ಬೆಳದಿಂಗಳ ರುಚಿಯ ಇಂದ್ರಿಯಾತೀತವಾದ ಅನುಭವವನ್ನು ಹೇಳುತ್ತದೆ. ಮೂರನೆಯ ಸಾಲು ಒಂದರೊಳಗೊಂದು ಬೆರೆತು ಹೋದ, ಬೇರ್ಪಡಿಸಲಾಗದ ನನೆಯೊಳಗಣ ಪರಿಮಳವನ್ನು ಹೇಳಿದರೆ, ಕೊನೆಯ ಸಾಲು ಕನ್ನೆಯಲ್ಲಿ ಮುಗ್ದವಾಗಿ ಗುಪ್ತವಾಗಿ ಅಡಗಿರುವ ಭಾವನಾತ್ಮಕ ಸಂಬಂಧವನ್ನು ಹೇಳುತ್ತದೆ. 'ಬಯ್ಕೆಯ ಕಿಚ್ಚಿನ ಅದಮ್ಯತೆಯನ್ನು ಮೊದಲ ಸಾಲು ಸೂಚಿಸಿದರೆ ಉಳಿದ ಮೂರು ವಾಕ್ಯಗಳು ಬೆಳಂದಿಗಳು, ಪರಿಮಳ ಕನ್ನೆಯ ಸ್ನೇಹ–ಇವುಗಳ ಅಹ್ಲಾದತೆ ಉಲ್ಲಾಸ, ಮಾರ್ದವತೆಯನ್ನು ಸಹಜವಾದ ಭಾಷೆಯಲ್ಲಿ ಹೊರಹೊಮ್ಮಿಸಿವೆ', ಇವೆಲ್ಲವುಗಳಲ್ಲಡಗಿದ ಯಾವುದೋ ರಹಸ್ಯ ಹಾಗೂ ಶೀತಲ ಗಾಂಭರ್ಯಗಳು 'ಕನ್ನೆಯ ಸ್ನೇಹ'ದ ಅನಿರ್ವಚನೀಯ ಅನುಭವದ ಮೇಲೆ ಬೆಳಕು ಬೀರುತ್ತವೆ. ಅಭಿವ್ಯಕ್ತಿಗೆ ಅತೀತವಾದ ಅನುಭಾವದ ಅನುಭವವನ್ನು ಮೂರ್ತಗೊಳಿಸುವುದರಲ್ಲಿ ಈ ವಚನ ಯಶಸ್ವಿಯಾಗಿದೆ. ಮತ್ತೊಂದೆಡೆ,

ಹಾವಿನ ಹೆಡೆಗಳ ಕೊಂಡು ಕೆನ್ನೆಯ ತುರಿಸುವಂತೆ

ಉರಿವ ಕೊಳ್ಳಿಯು ಕೊಂಡು ಮಂಡೆಯ ಸಿಕ್ಕ ಬಿಡಿಸುವಂತೆ,


ಹುಲಿಯ ಮೀಸೆಯ ಹಿಡಿದುಕೊಂಡು ಬಿಲಿದುಯ್ಯಲೆಯಾಡುವಂತೆ

ಕೂಡಲ ಸಂಗನ ಶರಣರೊಡನೆ ಮರೆದು ಸರಸವಾಡಿದರೆ

ಸುಣ್ಣದ ಕಲ್ಲು ಮಡಿಲಲ್ಲಿ ಕಟ್ಟಿಕೊಂಡು ಮಡುವ ಬಿದ್ದಂತೆ'

ಎನ್ನುವಲ್ಲಿ ಕೂಡಲ ಸಂಗನ ಶರಣರೊಡನೆ ಮೈರೆತು ವಿನಯದಿಂದ ನಡೆದುಕೊಂಡರೆ ಸುಣ್ಣದ ಕಲ್ಲನ್ನು ಮಡಿಲಲ್ಲಿ ಕಟ್ಟಿಕೊಂಡು ಮಡುವಿಗೆ ಬಿದ್ದಂತೆ ಎಂಬುವುದನ್ನು ಹೇಳುವಾಗ ಬಸವಣ್ಣವರು ಬಳಸಿರುವ ಮಾಲೋಪಮೆ ಮೃತ್ಯು ಭಯಂಕರ ಚಿತ್ರಗಳ ಮಾಲೆಯನ್ನೇ ಸೃಷ್ಟಿಸಿದೆ. 'ಒಲಿದುಯ್ಯಲೆಯಾಡಿದಂತೆ' ಎಂಬ ಮಾತು ಮತೂ ಗಮನಾರ್ಹ.

ಇಂಥ ಉಪಮೆಗಳು ಬಸವಣ್ಣನವರಲ್ಲಿ ಹೆಜ್ಜೆ ಹೆಜ್ಜೆಗೂ ಮಿಂಚುತ್ತವೆ. ಮನಸ್ಸಿನ ಟೊಳ್ಳನ್ನು ಹೇಳುವ 'ಎನ್ನ ಚಿತ್ತವು ಅತ್ತಿಯ ಹಣ್ಣು ನೋಡಯ್ಯ' ಎನ್ನುವಲ್ಲಿ ವ್ಯರ್ಥಭಕ್ತಿಯನ್ನು ಚಿತ್ರಿಸುವ 'ಎಳ್ಳಿಲ್ಲದ ಗಾಣದಂತಾಯಿತ್ತು. ' ಊಡದ ಆವಿಂಗೆ ಉರ್ಣಣದ ಕರುವ ಬಿಟ್ಟಂತೆ', 'ಕಂಬಳಿಯಲ್ಲಿ ಕಣಕವ ನಾದಿಯಂತೆ' ಎನ್ನುವಲ್ಲಿ, ಸಂಸಾರದ ಭಯಂಕರತೆ ನಶ್ವರತೆಗಳನ್ನು ಚಿತ್ರಿಸುವ 'ಕಪ್ಪೆ ಸರ್ಪದ ನೆರಳಿನಲ್ಲಿಪ್ಪಂತೆ' ನಾನಾ ವರ್ಣದ ಸಂಸಾರ ಹಾವು ಹಾವಾಡಿಗನ ಸ್ನೇಹದಂತೆ' ಎನ್ನುವಲ್ಲಿ ಅನುಭಾವ ಸ್ಥಿತಿಯನ್ನು ವರ್ಣಿಸುವ 'ಆಲಿಕಲ್ಲು ಹರಳಿನಂತೆ, ಅರಗಿನ ಪುತ್ತಳಿಯಂತೆ' ಎನ್ನುವಲ್ಲಿ ಇಲ್ಲೆಲ್ಲ ಮಿಂಚಿರುವ ಬಸವಣ್ಣನವರ ಉಪಮಾಲೋಕ ಒಂದು ಅದ್ಭುತ ಚಿತ್ರಸೃಷ್ಟಿ.



ಬಸವಣ್ಣನವರ ವಚನಗಳ ಮತ್ತೊಂದು ಗುಣ ಅವರ ರೂಪಕ ವೈಭವ. ಕನ್ನಡ ಸಾಹಿತ್ಯದಲ್ಲಿ ನಾರಣಪ್ಪ, ಬಸವೇಶ್ವರ ಇವ–ರಿಬ್ಬರ ಹಾಗೆ ಭಾಷೆಯ ಸಾಧ್ಯತೆ ಸೂರೆ ಮಾಡಿದವರು, ಹಾಗೂ ರೂಪಕ ನಿರ್ಮಾಣ ಮಾಡಿದವರು ವಿರಳವೆಂದೇ ಹೇಳಬೇಕು. ಇದಕ್ಕೆ ನಿದರ್ಶನಕ್ಕೆ–

**'ಮುರ್ತ್ಯಲೋಕವೆಂಬುದು ಕರ್ತಾರನ ಕಮ್ಮಟವಯ್ಯ**

**ಇಲ್ಲಿ ಸಲ್ಲುವರು ಅಲ್ಲಿಯೂ ಸಲ್ಲುವರಯ್ಯಾ**

**ಇಲ್ಲಿ ಸಲ್ಲದವರು ಅಲ್ಲಿಯೂ ಸಲ್ಲರಯ್ಯಾ'**

ಎಂಬ ಪ್ರಸಿದ್ದ ವಚನವನ್ನು ನೋಡಬಹುದು. ಇದರಲ್ಲಿ ಇಹದ ಬದುಕನ್ನು ಒಪ್ಪಿಕೊಂಡು, ಅದರಲ್ಲಿ ಗೆದ್ದು ಶುದ್ಧವಾಗುವ ವಿಚಾರವನ್ನು ಎರಕ ಹೊಯ್ದಿದ್ದಾರೆ. ಹಾಗೆಯೇ ದೇಹದೇಗುಲ ನಿರ್ಮಾಣವನ್ನು ಹೇಳುವ

'ಉಳ್ಳವರು ಶಿವಾಲಯವ ಮಾಡುವರು

ನಾನೇನ ಮಾಡುವೆ? ಬಡವನಯ್ಯಾ

ಎನ್ನ ಕಾಲೆ ಕಂಭ ದೇಹವೇ ದೇಗುಲ, ಶಿರವೆ ಹೊನ್ನ ಕಳಸವಯ್ಯಾ' ಈ ವಚನದಲ್ಲಿ ಕಾಲೇ ಕಂಭವಾಗಿ, ದೇಹವೇ ದೇಗುಲವಾಗಿ, ಶಿರ ಹೊನ್ನ ಕಳಸವಾದ ಈ ರೂಪಕ, ಭಕ್ತನ ಅತ್ಯನ್ನತ ಸ್ಥಿತಿಯನ್ನು ಭವ್ಯವಾಗಿ ಚಿತ್ರಿಸುತ್ತದೆ. 'ಉಳ್ಳವರು ಮತ್ತು ಭಕ್ತಿಯನ್ನು 'ಮಾಡುವುದರ' ಮೂಲಕ ತೋ–ರಿಸಿದರೆ, ಶರಣರು ತಮ್ಮನ್ನು ಶಿವನಿಗೆ ಅರ್ಪಿಸಿಕೊಳ್ಳುವುದರ ಮೂಲಕ ತೋರಿಸುತ್ತಾರೆ. ಉಳ್ಳವರ ಭಕ್ತಿಯ ಅಭಿವ್ಯಕ್ತಿ ಅಷ್ಟೇ; ಆದರೆ ಶರಣರು ಸ್ವತಃ ಆಲಯವಾಗಿರುವುದು. ಅನುಭಾವ ಸ್ಥಿತಿಯ ಪ್ರತೀಕ ಅಲ್ಲದೆ ಧರ್ಮದ ಹೆಸರಿನಲ್ಲಿನ ಶೋಷಣೆ ಮಾಡುವ ದೇವಾಲಯವೆಂಬ ಸಂಸ್ಥೆಯನ್ನು ತಿರಸ್ಕರಿಸಿ, ದೇವಾಲಯವನ್ನು ದೇಹಕ್ಕೆ ಸ್ಥಳಾಂತರಿಸುವ ಅಪೂರ್ವ ವಿಚಾರಕ್ರಾಂತಿ ಇಲ್ಲಿ ರೂಪಕದಲ್ಲಿ ರಚನೆ ಆಗಿವೆ.

ಬಸವಣ್ಣನವರ ವಚನಗಳಲ್ಲಿ ಉಪಮೆ, ರೂಪಕಗಳ ಸಮೃದ್ಧಿ ನಾವು ನೋಡಬಹುದು. ಬಸವಣ್ಣನವರದು ಮುಚ್ಚಿಟ್ಟ ಬದುಕಲ್ಲ, ಬಿಚ್ಚಿಟ್ಟ ಬದುಕು. ತಮ್ಮ ಅಂತರಂಗವನ್ನೇ ಜಗತ್ತಿನೆದರು ಬಿಚ್ಚಿಟ್ಟ ಮಹಾನುಭಾವರು. ಜಗತ್ತಿನಲ್ಲಿ ತೀರವುರಳ ಎಲ್ಲ ವಚನಕಾರರಗಿಂತ ಅವನಲ್ಲಿ ನಿಸ್ಸಂಕೋಚದ ಅಂತರ್ನಿರೀಕ್ಷಣೆಯ ಪ್ರವೃತ್ತಿಯಿದೆ. ಸತ್ಯದ ಹಾದಿಯಲ್ಲಿ ನಡೆದ ಮಹಾಸಾಧಕನೊಬ್ಬ ತನ್ನಂತರಂಗ ಹಾಗೂ ಬಹಿರಂಗ ಜಗತ್ತಿನೊಡನೆ ನಡೆಸಿದ ನಿರಂತರ ಹೋರಾಟ ಕ್ರಿಯೆ–ಪ್ರಕ್ರಿಯೆಗಳ ಚಿತ್ರ ಇವುಗಳಲ್ಲಿವೆ.



## ಆದರ್ಶ ವಿದ್ಯಾಲಯ ಶೇ.98 ಫಲಿತಾಂಶ



ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ತಾಲೂಕಿನ ಬಿದರಕುಂದಿ ಗ್ರಾಮದ ಆದರ್ಶ ವಿದ್ಯಾಲಯದ ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ್ದಾರೆ. ಒಟ್ಟು 70 ವಿದ್ಯಾರ್ಥಿಗಳಲ್ಲಿ 34 ವಿದ್ಯಾರ್ಥಿಗಳು ( 15 ಗಂಡು 19 ಹೆಣ್ಣು) ಡಿಸ್ಟಿಂಕ್ಶನ್, 29 ವಿದ್ಯಾರ್ಥಿಗಳು ( 16 ಗಂಡು 13 ಹೆಣ್ಣು), ಪ್ರಥಮ ಸ್ಥಾನ, 3 ವಿದ್ಯಾರ್ಥಿಗಳು ( 3 ಗಂಡು) ದ್ವಿತೀಯ ಸ್ಥಾನ, ಒಬ್ಬ ವಿದ್ಯಾರ್ಥಿ ತೃತೀಯ ಸ್ಥಾನದಲ್ಲಿ ಉತ್ತೀರ್ಣರಾಗಿರುವ ಮೂಲಕ ಶಾಲೆಗೆ ಶೇ98 ಫಲಿತಾಂಶ ಬಂದಿದ್ದು, ಶಾಲಾ ಬೋಧಕ ಸಿಬ್ಬಂದಿ ಹರ್ಷ ವ್ಯಕ್ತಪಡಿಸಿದ್ದಾರೆ.

## ಆದರ್ಶ ಪ್ರೌಡಶಾಲೆಗೆ ಶೇ.100 ಫಲಿತಾಂಶ

ಉದಯರಶ್ಮಿ ನ್ಯೂಸ್

ಕಲಕೇರಿ: ಗ್ರಾಮದ ಆದರ್ಶ ಆಂಗ್ಲ ಮತ್ತು ಕನ್ನಡ ಮಾಧ್ಯಮ ಪ್ರೌಡಶಾಲೆಯ ವಿದ್ಯಾರ್ಥಿಗಳು 2023–24 ನೇ ಸಾಲಿನ ಎಸ್–ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದು, ಶಾಲೆಯ ಒಟ್ಟು ಫಲಿತಾಂಶ ಶೇ.100 ರಷ್ಟು ಬರುವ ಮೂಲಕ ಸಿಂದಗಿ ತಾಲೂಕಿಗೆ ತೃತೀಯ ಸ್ಥಾನ ಪಡೆದುಕೊಂಡಿದೆ. ಪರಿಕ್ಷೇಗೆ ಹಾಜರಾದ 114 ವಿದ್ಯಾರ್ಥಿಗಳಲ್ಲಿ 36 ಮಕ್ಕಳು ಉನ್ನತ ಶ್ರೇಣಿಯಲ್ಲಿ, 71 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ, 07 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ.



ಕುಮಾರ ಎಮ್.ಡಿ.ಯಾಸಿನ ಹೊನ್ನಳ್ಳಿ–612 – 98% ಪಡೆದು ಪ್ರಥಮ ಸ್ಥಾನ, ಸುಮಯ್ಯಾ ನಾಯ್ಕೋಡಿ –602 – 96.3%

ದ್ವಿತೀಯ ಸ್ಥಾನ, ಆಕಾಶ ಚಳ್ಳಗಿ – 601 – 96.02% ತೃತೀಯ ಸ್ಥಾನ, ತಮನ್ನಾ ಜಾಗಿರದಾರ–597 – 95.05% ನಾಲ್ಕನೆ ಸ್ಥಾನ ಪಡೆದು ಶಾಲೆಗೆ ಕೀರ್ತಿಯನ್ನು ತಂದಿದ್ದು, ಒಟ್ಟು 16 ವಿದ್ಯಾರ್ಥಿಗಳು ಶೇಕಡಾ 90ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದಿದ್ದಾರೆ. ಮಕ್ಕಳ ಸಾಧನೆಗೆ ಮುಖ್ಯಗುರುಗಳು, ಸಿಬ್ಬಂದಿ ವರ್ಗ ಹಾಗೂ ಆಡಳಿತ ಮಂಡಳಿ ಶುಭ ಹಾರೈಸಿದ್ದಾರೆ.

## ಎಸ್‌ಡಿಕೆ ಪ್ರೌಢ ಶಾಲೆಯ ಗಮನಾರ್ಹ ಸಾಧನೆ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ತಾಲೂಕಿನ ನಾಗರಬೆಟ್ಟ ಗ್ರಾಮದ ಎಸ್‌ಡಿಕೆ ಕನ್ನಡ ಮಾಧ್ಯಮ ಪ್ರೌಢ ಶಾಲೆಯ ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ್ದಾರೆ. ಅಭಿಲಾಷಾ ವಾಲಿಕಾರ 614 (ಶೇ.98.24) ಅಂಕಗಳಿಸಿ ಶಾಲೆಗೆ ಪ್ರಥಮ, ಸಂತೋಷ ಹಂಗರಗಿ 612 (ಶೇ.97.92) ಅಂಕಗಳಿಸಿ ಶಾಲೆಗೆ ದ್ವಿತೀಯ, ಮತ್ತು ವಿರೇಶ ಭಟ್ಟಿ ಹಾಗೂ ಅಶ್ವಿನಿ ರುದ್ರಗಂಟಿ ತಲಾ 611 (ಶೇ.97.76) ಅಂಕಗಳಿಸಿ ಶಾಲೆಗೆ ತೃತೀಯ ಸ್ಥಾನವನ್ನು ಪಡೆದು ಸಾಧನೆ ಮಾಡಿದ್ದಾರೆ.




ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಅಧ್ಯಕ್ಷ ಬಿ.ಜಿ.ಮಠ ಸೇರಿದಂತೆ ಬೋಧಕ ಸಿಬ್ಬಂದಿ ಹರ್ಷ ವ್ಯಕ್ತಪಡಿಸಿದ್ದಾರೆ.

## ಪ್ರೇರಣಾ ಪಬ್ಲಿಕ್ ಪ್ರೌಢ ಶಾಲೆ ಶೇ.100 ಸಾಧನೆ

ಉದಯರಶ್ಮಿ ನ್ಯೂಸ್

ಸಿಂದಗಿ: ಪಟ್ಟಣದ ಹೊರವಲಯದ ರಾಂಪೂರ ರಸ್ತೆಯಲ್ಲಿರುವ ಪ್ರೇರಣಾ ಪಬ್ಲಿಕ್ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ವಿದ್ಯಾರ್ಥಿಗಳು ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ 104 ವಿದ್ಯಾರ್ಥಿಗಳು ನೋಂದಣಿಯಾಗಿದ್ದು, 67 ವಿದ್ಯಾರ್ಥಿಗಳು ಅತ್ಯುತ್ತಮ ಶ್ರೇಣಿ, 29 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ, 08 ವಿದ್ಯಾರ್ಥಿಗಳು ದ್ವಿತಿಯ ಶ್ರೇಣಿಯಲ್ಲಿ ಉತ್ತೀರ್ಣಗೊಂಡಿದ್ದು ಶಾಲೆಯ ಫಲಿತಾಂಶವು 100ಕ್ಕೆ100 ರಷ್ಟಾಗಿದೆ.



ಸ್ನೇಹಾ ಬಂದೆ, ಸೃಷ್ಟಿ ರೊಟ್ಟಿ, 611 (ಶೇ.97.76) ಅಂಕಗಳನ್ನು ಪಡೆದುಕೊಂಡು ಶಾಲೆಗೆ ಪ್ರಥ–'ಮ ಸ್ಥಾನ, ಅನಮ ಬಳಗಾನೂರ 602 (ಶೇ.96.32) ದ್ವಿತಿಯ ಸ್ಥಾನ, ಅನ್ನಪೂರ್ಣ ಪಾಟೀಲ 600 (ಶೇ.96) ಅಂಕಗಳನ್ನು ಗಳಿಸಿ ತೃತೀಯ ಸ್ಥಾನ ಪಡೆದು ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಸಂಸ್ಥೆಯ ಅಧ್ಯಕ್ಷ ಆರ್.ಡಿ.ಕುಲಕರ್ಣಿ, ನಿರ್ದೇಶಕ ಪಿ.ಡಿ. ಕುಲಕರ್ಣಿ ಹಾಗೂ ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯೆ ಎಸ್. ಆಯ್.ಅಸ್ಕಿ ಸೇರಿದಂತೆ ಬೋಧಕ, ಬೋಧಕೇತರ ಸಿಬ್ಬಂದಿಗಳು ಮತ್ತು ಪಾಲಕರು ಅಭಿನಂದಿಸಿ ಹರ್ಷ ವ್ಯಕ್ತಪಡಿಸಿದ್ದಾರೆ.

## ಕಲ್ಪವೃಕ್ಷ ಪ್ರೌಢ ಶಾಲೆ ವಿದ್ಯಾರ್ಥಿಗಳ ಉತ್ತಮ ಸಾಧನೆ

ಉದಯರಶ್ಮಿ ನ್ಯೂಸ್

ಮೋರಟಗಿ: 2024ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಗ್ರಾಮದ ಕಲ್ಪವೃಕ್ಷ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯಲ್ಲಿ 66 ವಿದ್ಯಾರ್ಥಿಗಳಲ್ಲಿ 63 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಅತ್ಯುತ್ತಮ ಶ್ರೇಣಿ 20, ಪ್ರಥಮ ಶ್ರೇಣಿ 39, ದ್ವಿತೀಯ ಶ್ರೇಣಿ 4 ವಿದ್ಯಾರ್ಥಿಗಳು ಮತ್ತು ಕನ್ನಡ ಮಾಧ್ಯಮ ಪ್ರೌಢ ಶಾಲೆಯಲ್ಲಿ 76 ವಿದ್ಯಾರ್ಥಿಗಳಲ್ಲಿ 70 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ ಅತ್ಯುನ್ನತ ಶ್ರೇಣಿ 18, ಪ್ರಥಮ ಶ್ರೇಣಿ 45, ದ್ವಿತೀಯ ಶ್ರೇಣಿ 6 ವಿದ್ಯಾರ್ಥಿಗಳು ಪಡೆದುಕೊಂಡಿದ್ದಾರೆ

ಆಂಗ್ಲ ಮಾಧ್ಯಮ ಪ್ರೌಢ ಶಾಲೆ 1) ಅಶುತೋಷ 613 (98.08%)



2) ತನುಷಾ ಮಂದೇವಾಲಿ 599 (95.84%), 3) ರವ್ಯಾ ತಮಗೊಂಡ 585 (93.60%)

4) ಪ್ರಸಾದ ರಾಠೋಡ 585 (93.60), ಕನ್ನಡ ಮಾಧ್ಯಮ ಪ್ರೌಢ ಶಾಲೆ, 5) ಭಗವಂತ್ರಾಯ ಮುದ್ದಾ 594 (95.04%), 6) ದ್ಯಾವಮ್ಮ ನಾಯ್ಕೋಡಿ 576 (92.16%)

7) ಸುನೀಲ ಆಸಂಗಿಹಾಳ 572 (91.52%)

ಉತ್ತಮ ಸಾದನೆ ಮಾಡಿ ಶಾಲೆಯ ಕೀರ್ತಿ ಹೆಚ್ಚಿಸಿದ ಎಲ್ಲ ವಿದ್ಯಾರ್ಥಿಗಳಿಗೆ ಶಾಲೆಯ ಸಂಸ್ಥಾಪಕ ಅಧ್ಯಕ್ಷರು ಆಡಳಿತ ಮಂಡಳಿ ಅಭಿನಂದನೆಗಳನ್ನು ಸಲ್ಲಿಸಿ ವಿದ್ಯಾರ್ಥಿಗಳ ಜೀವನ ಉನ್ನತ ಮಟ್ಟಕ್ಕೆ ಬೆಳೆಯಲಿ ಎಂದು ಹಾರೈಸಿದ್ದಾರೆ.

## ಸಿಂದಗಿ: ಬಸವ & ಹೇಮರೆಡ್ಡಿ ಮಲ್ಲಮ್ಮ ಜಯಂತಿ

ಉದಯರಶ್ಮಿ ನ್ಯೂಸ್

ಸಿಂದಗಿ: ಪಟ್ಟಣದ ತಹಶೀಲ್ದಾರ್ ಕಛೇರಿಯಲ್ಲಿ ಮೇ.10ರಂದು ಬೆಳಿಗ್ಗೆ 10ಗಂಟೆಗೆ ಬಸವ ಜಯಂತಿ ಹಾಗೂ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಹಾಗೂ ಮೇ.12ರಂದು ಬೆಳಿಗ್ಗೆ 10ಗಂಟೆಗೆ ಶಂಕರಾಚಾರ್ಯರ ಜಯಂತಿಯನ್ನು ಲೋಕಸಭಾ ಚುನಾವಣಾ ನೀತಿ ಸಂಹಿತೆಯ ನಿಯಮಗಳನ್ನು ಅನುಸರಿಸುತ್ತಾ ಸರಳವಾಗಿ ಕಾರ್ಯಾಲಯದ ಸಭಾ ಭವನದಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಜಯಂತಿ ಕಾರ್ಯಕ್ರಮಗಳನ್ನು ನೇರವೇರಿಸಲಾಗುವುದು. ಕಾರಣ ಮುಖಂಡರು, ವಿವಿಧ ಸಂಘಟನೆಯ ಪದಾಧಿಕಾರಿಗಳು, ಸಾರ್ವಜನಿಕರು, ತಾಲೂಕು ಮಟ್ಟದ ಎಲ್ಲ ಅಧಿಕಾರಿಗಳು, ಸಿಬ್ಬಂದಿ ವರ್ಗ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ತಹಶೀಲ್ದಾರ್ ಪ್ರದೀಪಕುಮಾರ ಹಿರೇಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಸಿದ್ದಾರೆ.

## ಭೀರಲಿಂಗೇಶ್ವರ ಜಾತ್ರೆ :ಧರ್ಮ ಸಭೆ ಇಂದು

ಉದಯರಶ್ಮಿ ನ್ಯೂಸ್

ಕಲಕೇರಿ: ಗ್ರಾಮದ ಭೀರಲಿಂಗೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವದ ಪ್ರಯುಕ್ತವಾಗಿ ಭೀರಲಿಂಗೇಶ್ವರ ದೇವಸ್ಥಾನದಲ್ಲಿ ಮೇ.10 ರಂದು ಶುಕ್ರವಾರ ವಿವಿದ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.



ಶುಕ್ರವಾರ ಬೆಳಿಗ್ಗೆ 9 ಘಂಟೆಗೆ ಪಟ್ಟಾಧಿಕಾರ ಕಾರ್ಯಕ್ರಮ ನಡೆಯಲಿದ್ದು, ಮಧ್ಯಾಹ್ನ 12 ಘಂಟೆಗೆ ವಾಲಗದ ಕಾರ್ಯಕ್ರಮ ನಡೆಯಲಿದೆ. ಸಂಜೆ 5 ಘಂಟೆಗೆ ಜಾತ್ರಾಮಹೋತ್ಸವದ ಪ್ರಯುಕ್ತವಾಗಿ ಧರ್ಮಸಭೆ ಕಾರ್ಯಕ್ರಮ ನಡೆಯಲಿದ್ದು, ಧರ್ಮಸಭೆಯ ದಿವ್ಯಸಾನಿಧ್ಯವನ್ನು ಸರೂರ ಗುರುಪೀಠದ ರೇವಣಸಿದ್ದೇಶ್ವರ ಶಾಂತಮುನಿ ಸ್ವಾಮಿಗಳು, ಸಾನಿಧ್ಯವನ್ನು ಹುಲಜಂತಿಯ ಮಾಳಿಂಗರಾಯ ದೇವರು, ಕಲಕೇರಿಯ ಗದ್ದಿಗಿಮಠದ ಗುರುಮಡಿವಾಳೇಶ್ವರ ಶಿವಾಚಾರ್ಯರು, ಗುರುಮರುಳಾರಾಧ್ಯರ ಹಿರೇಮಠದ ಸಿದ್ದರಾಮ ಶಿವಾಚಾರ್ಯರು, ಚಟ್ಟರಕಿಯ ಕೆಂಚಪ್ಪಮುತ್ಯಾ ಪೂಜಾರಿ, ಸರೂರ ಮೂಲ ಗುರುಪೀಠದ ಸನಯ್ಯಮುತ್ಯಾ ಹಾಲಮತ ಇವರು ವಹಿಸುವರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ದೇವರಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ ಕುದರಿಸಾಲೋಡಗಿ ವಹಿಸಲಿದ್ದು, ಉದ್ಘಾಟಕರಾಗಿ ಮಾಜಿ ಶಾಸಕರಾದ ಸೋಮನಗೌಡ ಪಾಟೀಲ ಸಾಸನೂರ, ಶರಣಪ್ಪ ಸುಣಗಾರ ಭಾಗಿಯಾಗುವರು, ವಿಜಯಪುರದ ಅನುಗ್ರಹ ಕಣ್ಣಿನ ಆಸ್ಪತ್ರೆಯ ಡಾ.ಪ್ರಭುಗೌಡ ಪಾಟೀಲ ಲಿಂಗದಳ್ಳಿ ಜ್ಯೋತಿಯನ್ನು ಬೆಳಗಿಸುವರು, ಡಾ. ವೀರೇಶ ತಳ್ಳೊಳ್ಳಿ ಪುಷ್ಪಾರ್ಚನೆ ಮಾಡುವರು. ಎಂ.ಜಿ.ಎಂ.ಕೆ ಪಿಯು ಕಾಲೇಜಿನ ಪ್ರಾಚಾರ್ಯ ಎಸ್.ಕೆ.ಹರನಾಳ ವಿಶೇಷ ಉಪನ್ಯಾಸ ನೀಡಲಿದ್ದು, ಇದೇ ವೇಳೆ ವಿವಿದ ಕ್ಷೇತ್ರಗಳ ಸಾಧಕ–ರಿಗೆ ಸನ್ಮಾನಿಸಿ ಗೌರವಿಸಲಾಗುವದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಶಾರದಾ ಪ್ರೌಢ ಶಾಲೆಯ ಉತ್ತಮ ಸಾಧನೆ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಪಟ್ಟಣದ ಶಾರದಾ ಪ್ರೌಢ ಶಾಲೆಯ ವಿದ್ಯಾರ್ಥಿಗಳು ಎಸ್‌ಎಸ್–ಎಲ್‌ಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ್ದಾರೆ. ಕನ್ನಡ ಮಾಧ್ಯಮದಲ್ಲಿ ಮೇಘಾ ಕ್ಯಾದಗಿ 599(ಶೇ95.84) ಅಂಗಗಳನ್ನು ಪಡೆದು ಶಾಲೆಗೆ ಪ್ರಥಮ, ಸಾಧಿಕಾ ನಾಯ್ಕೋಡಿ 593(ಶೇ94.88) ಅಂಕಗಳನ್ನು ಪಡೆದು ದ್ವಿತೀಯ, ಲಕ್ಷ್ಮಿ ಕಾಜಗಾರ 549(ಶೇ87.84) ಅಂಕಗಳನ್ನು ತೃತೀಯ ಸ್ಥಾನದಲ್ಲಿ ಮತ್ತು ಆಂಗ್ಲ ಮಾಧ್ಯಮದಲ್ಲಿ ಆಶಿಯಾ ಕೇಸಾಪೂರ 594(ಶೇ95.04) ಅಂಕಗಳನ್ನು ಪಡೆದು ಶಾಲೆಗೆ ಪ್ರಥಮ, ಮಿಶ್ರಿತಬೇಗಂ ಬಾಗವಾನ 687(ಶೇ93.92) ಅಂಕಗಳನ್ನು ಪಡೆದು ದ್ವಿತೀಯ, ಕನಕಾ ಮುರಾಳ 564(ಶೇ90.24) ಅಂಕಗಳನ್ನು ಪಡೆದು ತೃತೀಯ ಸ್ಥಾನ ಪಡೆದು ಸಾಧನೆ ಮಾಡಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಪದಾಧಿಕಾ–ರಿಗಳು, ಮುಖ್ಯಗುರುಗಳು ಹಾಗೂ ಬೋಧಕ ಸಿಬ್ಬಂದಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.



## ಮೇ.12ರಂದು ವಿದ್ಯುತ್ ವ್ಯತ್ಯೇಯ

ಉದಯರಶ್ಮಿ ನ್ಯೂಸ್



ಸಿಂದಗಿ: ತಾಲೂಕಿನ 33/11ಕೆವಿ ವಿದ್ಯುತ್ ವಿತರಣಾ ಕೇಂದ್ರ ಗೋಲಗೇರಿಯಲ್ಲಿ ತುರ್ತು ನಿರ್ವಹಣಾ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಸದರಿ ವಿದ್ಯುತ್ ವಿತರಣಾ ಕೇಂದ್ರದ ಮೇಲೆ ಬರುವ ಎಲ್ಲ ಗ್ರಾಮಗಳಿಗೆ ಮೇ.12ರಂದು ಬೆಳಿಗ್ಗೆ 09ಗಂಟೆಯಿಂದ ಸಾಯಂಕಾಲ 04ರವರೆಗೆ ವಿದ್ಯುತ್ ಪೂರೈಕೆ ಇರುವುದಿಲ್ಲ. ಆದ್ದರಿಂದ ಸದರಿ ಗ್ರಾಮಗಳ ಸಾರ್ವಜನಿಕರು ಸಹಕರಿಸಬೇಕು ಎಂದು ಸಿಂದಗಿ ಹೆಸ್ಕಾಂ ಉಪವಿಭಾಗದ ಸಹಾಯಕ ನಿರ್ವಾಹಕ ಅಭಿಯಂತರರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾಗ್ಯಶ್ರೀ ಹಡಪದ ಶಾಲೆಗೆ ಪ್ರಥಮ

ಉದಯರಶ್ಮಿ ನ್ಯೂಸ್



ಢವಳಗಿ: ಸಮೀಪದ ಬಸರಕೋಡ ಗ್ರಾಮದ ಶ್ರೀ ಪವಾಡ ಬಸವೇಶ್ವರ ಪ್ರೌಢಶಾಲೆಯ ವಿದ್ಯಾರ್ಥಿನಿಯಾದ ಭಾಗ್ಯಶ್ರೀ ಬಸವರಾಜ ಹಡಪದ ಅವರು ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಒಟ್ಟು 625ಕ್ಕೆ 521 ಅಂಕ ಗಳಿಸಿ ಶಾಲೆಗೆ ಪ್ರಥಮ ಸ್ಥಾನ ಪಡೆದ್ದಿದ್ದಾಳೆ.ವಿದ್ಯಾರ್ಥಿನಿಯ ಸಾಧನೆಗೆ ಶಾಲೆಯ ಶಿಕ್ಷಕರು ಸೇರಿದಂತೆ ತಂದೆ–ತಾಯಿ ಹರ್ಷ ವ್ಯಕ್ತಪಡಿಸಿದರು.

## ಮಲ್ಲಿಕಾರ್ಜುನ ಶಾಲೆ ವಿದ್ಯಾರ್ಥಿಗಳ ಉತ್ತಮ ಸಾಧನೆ

ಉದಯರಶ್ಮಿ ನ್ಯೂಸ್

ಸಿಂದಗಿ: ಪಟ್ಟಣದ ಬಂದಾಳ ರಸ್ತೆಯಲ್ಲಿರುವ ಶ್ರೀ ಸಂಗಮೇಶ್ವರ ವಿದ್ಯಾಲಯದ ಮಲ್ಲಿಕಾರ್ಜುನ ಪ್ರೌಢ ಶಾಲೆಯ ವಿದ್ಯಾರ್ಥಿಗಳು ಪ್ರಸಕ್ತ ಸಾಲಿನ ಎಸ್.ಎಸ್. ಎಲ್.ಸಿ. ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆಗೈದು ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ಪೂಜಾ ಹಳೆಮನಿ 568 (ಶೇ.90.88) ಅಂಕಗಳನ್ನು ಪಡೆದು ಪ್ರಥಮ ಸ್ಥಾನ, ಪೂಜಾ ಗುತ್ತರಗಿ 548 (ಶೇ.87.68) ದ್ವಿತೀಯ ಸ್ಥಾನ, ಬೋರಮ್ಮ ಹೊಸಮನಿ 533 (ಶೇ.85.25) ತೃತೀಯ ಸ್ಥಾನ ಪಡೆದು ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ಶಾಲೆಯ ಫಲಿತಾಂಶ 100ಕ್ಕೆ 94% ರಷ್ಟಾಗಿದೆ.

ವಿದ್ಯಾರ್ಥಿಗಳ ಈ ಸಾಧನೆಗೆ ಅಧ್ಯಕ್ಷೆ ಸಾವಿತ್ರಿ ಅರಳಗುಂಡಗಿ, ಪ್ರಧಾನ ಕಾರ್ಯದರ್ಶಿ ಮಹಾನಂದ ಪರಗೊಂಡ, ಆಡಳಿತ ಮಂಡಳಿ ಹಾಗೂ ಶಾಲೆಯ ಮುಖ್ಯಗುರುಗಳು ಸೇರಿದಂತೆ ಶಾಲೆಯ ಬೋಧಕ, ಬೋಧಕೇತರ ಸಿಬ್ಬಂದಿಗಳು ಹಾಗೂ ಪಾಲಕರು ಹರ್ಷ ವ್ಯಕ್ತಪಡಿಸಿ ಶುಭಕೋರಿದ್ದಾರೆ.



## ಎಸ್ಸೆಸ್ಸೆಲ್ಸಿ ಪರೀಕ್ಷೆ ಫಲಿತಾಂಶದಲ್ಲಿ ರಾಜ್ಯಮಟ್ಟದಲ್ಲಿ ಉತ್ತಮ ಸಾಧನೆ
## ವಿಜಯಪುರ ಜಿಲ್ಲೆ ಉತ್ತಮ ಸಾಧನೆ :ಡಿಸಿ ಶ್ಲಾಘನೆ

ವಿಜಯಪುರ: ರಾಜ್ಯದಲ್ಲಿ ಮಾರ್ಚ್–ಏಪ್ರಿಲ್‌ನಲ್ಲಿ ನಡೆದ ಎಸ್.ಎಸ್.ಎಲ್.ಸಿ ಪರೀಕ್ಷೆಯ ಫಲಿತಾಂಶದಲ್ಲಿ ಜಿಲ್ಲೆಯು ರಾಜ್ಯಮಟ್ಟದಲ್ಲಿ ಉತ್ತಮ ಸಾಧನೆ ತೋರಿದ್ದು, ಇದಕ್ಕಾಗಿ ಜಿಲ್ಲೆಯ ಎಲ್ಲಾ ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕ ವೃಂದ ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ. ಭೂಬಾಲನ್ ಅಭಿನಂದನೆ ತಿಳಿಸಿದ್ದಾರೆ.

ಈ ಬಾರಿಯ ಎಸ್. ಎಸ್.ಎಲ್.ಸಿ. ಫಲಿತಾಂಶದಲ್ಲಿ ವಿಜಯಪುರ ಶೈಕ್ಷಣಿಕ ಜಿಲ್ಲೆಯು ರಾಜ್ಯದಲ್ಲಿ 11 ನೇ ಸ್ಥಾನ (ಕಳೆದ ಬಾರಿಯೂ 11 ನೇ ಸ್ಥಾನ) ಪಡೆದಿದ್ದು, ಶೇ.79.31 ಫಲಿತಾಂಶ ಹೊಂದಿದೆ.

ಪರೀಕ್ಷೆಗೆ ಹಾಜರಾದ ಒಟ್ಟು 40368 ವಿದ್ಯಾರ್ಥಿಗಳಲ್ಲಿ 15615 ಬಾಲಕರು, 16401 ಬಾಲಕಿಯರು ಸೇರಿ ಒಟ್ಟು 32016 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ

ಜಿಲ್ಲೆಯಲ್ಲಿ ಈ ಬಾರಿಯ ಫಲಿತಾಂಶ ವೃದ್ಧಿಗಾಗಿ ಶಿಕ್ಷಣ ಇಲಾಖೆ ವತಿಯಿಂದ ಹಲವು ಶೈಕ್ಷಣಿಕ ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಾಗಿತ್ತು. ಶಿಕ್ಷಣ ಇಲಾಖೆಯ ಅಧಿಕಾರಿಗಳು ಎಲ್ಲಾ ಶಾಲೆಗಳ ಮುಖ್ಯ ಗುರುಗಳು ಮತ್ತು ಶಿಕ್ಷಕರೊಂದಿಗೆ ನಿರಂತರ ಸಭೆಗಳನ್ನು ನಡೆಸಿ ಸೂಕ್ತ ಮಾರ್ಗದರ್ಶನ ನೀಡಿದ್ದರು. ಡಿಸೆಂಬರ್ ವೇಳೆಗೆ ಎಲ್ಲಾ ವಿಷಯವಾರು ಭೋದನೆಯನ್ನು ಮುಕ್ತಾಯಗೊಳಿಸಿ, ಮಾರ್ಚ್ ವರೆಗೆ ಪುರ್ನಮನನ ಕಾರ್ಯಕ್ರಮ ನಡೆಸಲಾಗಿತ್ತು. ಕಲಿಕೆಯಲ್ಲಿ ಹಿಂದುಳಿದ ಮಕ್ಕಳನ್ನು ಗುರುತಿಸಿ ಅವರಿಗೆ ವಿಶೇಷ ತರಬೇತಿ ನೀಡಿ ಸಜ್ಜುಗೊಳಿಸಿ, ಶಾಲಾ ಮತ್ತು ತಾಲೂಕು ಹಂದಲ್ಲಿ ನುರಿತಿ ಶಿಕ್ಷಕರು ಮತ್ತು ಸಂಪನ್ಮೂಲ ವ್ಯಕ್ತಿಗಳಿಂದ ಕೋಚಿಂಗ್ ವ್ಯವಸ್ಥೆ ಮಾಡಲಾಗಿತ್ತು. ಗುಣಮಟ್ಟದ ಫಲಿತಾಂಶಕ್ಕಾಗಿ ಶಾಲಾ ಹಂತದ ವಿವಿಧ ಪರೀಕ್ಷೆಗಳಲ್ಲಿ ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದಲ್ಲಿ ವಿಶೇಷ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿ–ತ್ತು. ಅಲ್ಲದೇ ಶಾಲೆಯ ಮುಖ್ಯ ಗುರುಗಳು ಮತ್ತು ಶಿಕ್ಷಕರಿಗೂ ತಾಲೂಕು ಮಟ್ಟದಲ್ಲಿ ತರಬೇತಿಗಳನ್ನು ಆಯೋಜಿಸುವುದರ ಜೊತೆಗೆ, ಮಕ್ಕಳ



ಕಲಿಕೆಯ ಕುರಿತಂತೆ ನಿರಂತರವಾಗಿ ಶಿಕ್ಷಕರು ಮತ್ತು ಪೋಷಕರೊಂದಿಗೆ ಅನುಪಾಲನೆ ಮಾಡಲಾಗಿತ್ತು.

ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಅನಂದ ಅವರು ಆಗಾಗ ಸಭೆಗಳನ್ನು ಆಯೋಜಿಸಿ, ಅಗತ್ಯ ಸೂಚನೆ ಮಾರ್ಗದರ್ಶನಗಳನ್ನು ನೀಡಿದ್ದು, ಅವುಗಳ ಅನುಸರಣೆ ಜೊತೆಗೆ ಜಿಲ್ಲೆಯ ಜನಪ್ರತಿನಿಧಿಗಳ ನಿರ್ದೇಶಗಳ ಪಾಲನೆ ಹಾಗೂ ಸಂಘಟಿತ ಪ್ರಯತ್ನದಿಂದ ಉತ್ತಮ ಫಲಿತಾಂಶ ಪಡೆಯಲು ಸಾಧ್ಯವಾಗಿದೆ.

ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ಮುದ್ದೇಬಿಹಾಳ ತಾಲೂಕಿನ ಬಿದರಕುಂದಿ ಗ್ರಾಮದ ಸರಕಾರಿ ಆದರ್ಶ ವಿದ್ಯಾಲಯದ ಮೂಲತಃ ಡವಳಗಿ ಗ್ರಾಮದ ವಿದ್ಯಾರ್ಥಿನಿ ಪವಿತ್ರಾ ಮಡಿವಾಳಪ್ಪಗೌಡ ಕೊಣ್ಣೂರ 625 ಅಂಕಗಳಿಗೆ 623, ಶೇ. 99.68, ದ್ವಿತಿಯ ಸ್ಥಾನ ಪಡೆದ ವಿಜಯಪುರ ತಾಲೂಕಿನ ಕಾರಜೋಳ ಗ್ರಾಮದಲ್ಲಿರುವ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಪ್ರತಿಭಾ ನರುತಿ 622 ಅಂಕ ಶೇ.99.52 ಹಾಗೂ ತೃತೀಯ ಸ್ಥಾನದಲ್ಲಿರುವ ಮುದ್ದೇಬಿಹಾಳ ತಾಲೂಕಿನ ನಾಗರಬೆಟ್ಟ ಖಾಸಗಿ ಶಾಲೆಯ ಭೂಮಿಕಾ ಜುಮನಾಳ 620 ಅಂಕ ಶೇ.99.2 ಪಡೆದಿರುವದಕ್ಕೆ ಜಿಲ್ಲಾಧಿಕಾರಿ ಅಭಿನಂದಿಸಿ, ಮುಂದಿನ ಉಜ್ವಲ ಭವಿಷ್ಯಕ್ಕೆ ಶುಭ ಹಾರೈಸಿದ್ದಾರೆ.

### ಅನುತ್ತೀರ್ಣ ವಿದ್ಯಾರ್ಥಿಗಳು ದೃತಿಗೆಡಬಾರದು

ಪರೀಕ್ಷೆ1ರಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳು ಯಾವುದೇ ಕಾರಣಕ್ಕೂ ದೃತಿಗೆಡುವ ಅವಶ್ಯಕತೆಯಿಲ್ಲ. ನಿಮಗೆ ಉತ್ತೀಣರಾಗಲು ಮತ್ತೊಂದು ಅವಕಾಶವಿದ್ದು, ಜೂನ್ 7 ರಿಂದ ನಡೆಯುವ ಎಸ್.ಎಸ್.ಎಲ್.ಸಿ ಪರೀಕ್ಷೆ–2 ರಲ್ಲಿ ತಮಗೆ ಪುನಃ ಪರೀಕ್ಷೆ ಬರೆಯಲು ಅವಕಾಶವಿದೆ. ಜಿಲ್ಲೆಯ ಶಿಕ್ಷಣ ಇಲಾಖೆಯ ಎಲ್ಲಾ ಅಧಿಕಾರಿಗಳು ಮತ್ತು ಶಿಕ್ಷಕರು ಪ್ರಸ್ತುತ ಅನುತ್ತೀರ್ಣಗೊಂಡಿರುವ ವಿದ್ಯಾರ್ಥಿಗಳಿಗೆ ಸಾಂತ್ವನ ಹೇಳಿ, ಪರೀಕ್ಷೆ–2 ಗೆ ಅವರಿಗೆ ಅಗತ್ಯ ತರಬೇತಿ ನೀಡುವುದರ ಮೂಲಕ ಅವರೂ ಕೂಡಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ, ಜಿಲ್ಲೆಯು ಎಸ್. ಎಸ್.ಎಲ್.ಸಿ ಫಲಿತಾಂಶದಲ್ಲಿ ಶೇ.100 ಸಾಧನೆ ಮಾಡಲು ತಮ್ಮ ಶಕ್ತಿ ಮೀರಿ ಶ್ರಮಿಸಬೇಕು ಎಂದು ಜಿಲ್ಲಾಧಿಕಾರಿ ಟಿ. ಭೂ ಬಾಲನ್ ಅವರು ತಿಳಿಸಿದ್ದಾರೆ

ಉದಯರಶ್ಮಿ ದಿನಪತ್ರಿಕೆ

## ಕಾವ್ಯರಶ್ಮಿ

– ಸರೋಜಾದೇವಿ ನಿನ್ನೆಕರ್

("ನಮ್ಮ ಕಥಾ ಅರಮನೆ" ಬರಹಗಾರರು)



ಬಸವ ಜಯಂತಿಯ ಶುಭಾಶಯಗಳು

### ನಮ್ಮ ಬಸವಣ್ಣ



ಸಾಮಾಜಿಕ ತಾರತಮ್ಯವನು
ಮೂಢನಂಬಿಕೆ,ಜಾತಿ ವಿಷವನು
ಹೊರ ಹಾಕಿದ ಕ್ರಾಂತಿಯೋಗಿ ಬಸವಣ್ಣ..

ಇಷ್ಟ ಲಿಂಗ ಹಾರವನು ಕಂಡ
ಮಾನವರಲಿ ದೇವರನು ಕಂಡ
ಮಹಾ ಮಾನವತಾವಾದಿ ಬಸವಣ್ಣ..

ಕಾಯಕದಲಿ ಕೈಲಾಸವನು ಕಂಡ
ಭಕ್ತರಲಿ ಸರ್ವಸಮತೆಯನು ಕಂಡ
ನಮ್ಮ ಭಕ್ತಿ ಭಂಡಾರಿ ಬಸವಣ್ಣ..

ಜಾತಿ ಮತ ಲಿಂಗ ಭೇದ ತಿರಸ್ಕರಿಸಿದ
ಮಾನವೀಯತೆಯನು ಎತ್ತಿ ಹಿಡಿದ
ನಮ್ಮ ಜಗಜ್ಯೋತಿ ಬಸವಣ್ಣ..

ಕಾಯಕ ನಿಷ್ಠೆ ಧರ್ಮದ ಬುನಾದಿ ಎಂದ
ದಯವೇ ಧರ್ಮದ ಮೂಲವೆಂದ
ನಮ್ಮ ಜಗದ್ಗುರು ಬಸವಣ್ಣ..

ಸಾಹಿತ್ಯಕ್ಕೆ ವಚನಗಳ ಕೊಡುಗೆ ಕೊಟ್ಟ
ಸಾಮಾಜಿಕ ಅರಿವು ಹರಡಿಬಿಟ್ಟ
ನಮ್ಮ ವಿಶ್ವಗುರು ಬಸವಣ್ಣ..

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR